# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 191
Volume - 01 Issue - 191

ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269

ಚಿತ್ರದುರ್ಗ
Chitradurga

ದಿನಾಂಕ: 14–02–2024 ಬುಧವಾರ
Date: 14-02-2024 Wednesday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಸರ್ಕಾರಿ ನೌಕರರು ಸರ್ಕಾರದ ನಿಯಮಾವಳಿ ಅರಿತು ಕಾರ್ಯನಿರ್ವಹಿಸಿ 2

ಕುಡಿವ ನೀರಿನ ಸಮಸ್ಯೆಯಾಗದಂತೆ ಕ್ರಮ ವಹಿಸಿ: ಜಿಲ್ಲಾಧಿಕಾರಿ ಸೂಚನೆ 3

ಪ್ರೇಮಿಗಳ ದಿನ 4



ಸುದ್ದಿ, ಜಾಹಿರಾತಿಗೆ 9686622252


# ಅಂಗನವಾಡಿ, ಶಾಲೆ, ಹಾಸ್ಟೆಲ್‌ಗಳ ಆಹಾರ ಸುರಕ್ಷತೆ ನೊಂದಣಿ ಕಡ್ಡಾಯ: ಡಿಸಿ ವೆಂಕಟೇಶ್

» ಚಿತ್ರದುರ್ಗ

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ನಿಯಮ ಹಾಗೂ ನಿಬಂಧನೆಗಳ ಅನುಸಾರ ಅಂಗನವಾಡಿ, ಶಾಲೆ, ಹಾಸ್ಟೆಲ್‌ಗಳು ಆಹಾರ ಸುರಕ್ಷತೆ ನೊಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ. ಆಹಾರ ಸುರಕ್ಷತಾ ಅಧಿಕಾರಿಗಳು ಆಹಾರ ಗುಣಮಟ್ಟದ ಖಾತ್ರಿ ಕುರಿತು ನಿಯಮಿತವಾಗಿ ತಪಾಸಣೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್.ಟಿ ಸೂಚನೆ ನೀಡಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಕುರಿತು ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಹಾರ ಸೇವಿಸುವ ಮಕ್ಕಳ ಸುರಕ್ಷತೆ ಪ್ರಮುಖವಾದದು. ಮಧ್ಯಾಹ್ನದ ಬಿಸಿ ಊಟ ನೀಡುವ ಶಾಲೆಗಳು, ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸ್ಟೆಲ್‌ಗಳು, ಅಂಗನವಾಡಿಗಳು ತಪ್ಪದೇ ಆಹಾರ ಸುರಕ್ಷತೆಯ ನೊಂದಣಿ ಮಾಡಿಕೊಳ್ಳಬೇಕು. ಮಕ್ಕಳಿಗೆ ಊಟ ತಯಾರಿಸುವ ಬಾಣಸಿಗರು ಹಾಗೂ ಬಡಿಸುವರ ವೈದ್ಯಕೀಯ ಪ್ರಮಾಣ ಪತ್ರ ಪಡೆಯಬೇಕು. ಇಲ್ಲಿ ಬಳಸುವ ನೀರಿನ ಪರೀಕ್ಷೆ ಮಾಡಿಸಬೇಕು. ಅಡುಗೆಗೆ ಬಳಸುವ ಆಹಾರ ಪದಾರ್ಥಗಳ ಗುಣಮಟ್ಟದ ಜೊತೆಗೆ ಸ್ವಚ್ಛತೆಗೂ ಆದ್ಯತೆ ನೀಡಬೇಕು. ಆಹಾರ ಸುರಕ್ಷತೆ ಪ್ರಮಾಣ ಪತ್ರ ಪಡೆಯುವುದರಿಂದ ಅಡುಗೆ ತಯಾರಕರು ಮಾನಸಿಕವಾಗಿ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸುತ್ತಾರೆ ಎಂದರು.

ಜಿಲ್ಲಾ ಆಹಾರ ಸುರಕ್ಷತಾ ಅಂಕಿತ ಅಧಿಕಾರಿ ಡಾ. ಪಾಲಾಕ್ಷ ಮಾತನಾಡಿ, ಜಿಲ್ಲೆಯಲ್ಲಿ ಈಗಾಗಲೆ 450 ಶಾಲೆಗಳು ನೊಂದಣಿ ಮಾಡಿಕೊಂಡಿದ್ದು, ಇನ್ನೂ ಸುಮಾರು 2,000 ಶಾಲೆಗಳ ನೊಂದಣಿ ಬಾಕಿಯಿದೆ. ಶಾಲೆ, ಹಾಸ್ಟೆಲ್, ಅಂಗನವಾಡಿ ಕಾರ್ಯಕರ್ತೆಯರಿಗೆ ಆಹಾರ ಸುರಕ್ಷತೆ ಹಾಗೂ ಪಾಲಿಸಬೇಕಾದ ನಿಯಮಗಳ ಕುರಿತು ಕಾರ್ಯಗಾರ ಆಯೋಜಿಸಲಾಗುತ್ತಿದೆ ಎಂದರು.




ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಮಾತಾಡಿ, ಜಿಲ್ಲೆಯಲ್ಲಿ 2,428 ಅಂಗನವಾಡಿ ಕೇಂದ್ರಗಳಿಗೆ. ಇದರಲ್ಲಿ ಕೇವಲ 2 ಅಂಗನವಾಡಿಗಳು ಮಾತ್ರ ಆಹಾರ ಸುರಕ್ಷತೆಯ ನೊಂದಣಿ ಮಾಡಿಕೊಂಡಿವೆ.

ಅಂಗನವಾಡಿಗಳ ನೊಂದಣಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ವಹಿಸಲಾಗುವುದು ಎಂದರು.

ಬಾಕಿ ಉಳಿದ 2,000 ಶಾಲೆಗಳು ಆಯಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ನೇತೃತ್ವದಲ್ಲಿ ವಾರದಲ್ಲಿ ಆಹಾರ ಸುರಕ್ಷತೆ ನೊಂದಣಿ ಮಾಡಿಕೊಳ್ಳಬೇಕು. ಕಾಯ್ದೆ ಅನುಸಾರ ಅಂಗನವಾಡಿಗಳು ಮಹಿಳಾ ಸೇವಾ ಸಂಘಗಳು ನೊಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿವಾಗಿದೆ. ಇದಕ್ಕೆ ಯಾವುದೇ ವಿನಾಯಿತಿ ಇಲ್ಲ. ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ, ಅಲ್ಪಸಂಖ್ಯಾರ ಕಲ್ಯಾಣ ಇಲಾಖೆ ಹಾಸ್ಟೆಲ್‌ಗಳು ಸಹ ಕಡ್ಡಾಯವಾಗಿ ನೊಂದಣಿ ಮಾಡಿಕೊಳ್ಳಬೇಕು. ಇದರ ಜೊತೆಗೆ ಆಹಾರ ಇಲಾಖೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು, ಔಷಧಿ ಅಂಗಡಿಗಳು ನೊಂದಣಿ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್.ಟಿ ನಿರ್ದೇಶನ ನೀಡಿದರು.

ನಗರಸಭೆ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಆಹಾರ ಪದಾರ್ಥಗಳ ವ್ಯಾಪಾರಿಗಳಿಗೆ ಪರವಾನಿಗೆ ಹಾಗೂ ಅನುಮತಿ ಪತ್ರ ನೀಡುವ ಮೊದಲು ಆಹಾರ ಸುರಕ್ಷತೆಯ ನೊಂದಣಿ ಮಾಡುವಂತೆ ಷರತ್ತು ವಿಧಿಸಬೇಕು. ನೊಂದಣಿ ಮಾಡಿಕೊಳ್ಳದ ಆಹಾರ ಪದಾರ್ಥಗಳ ವ್ಯಾಪಾರಿಗಳ ಪರವಾನಿಗೆ ರದ್ದು ಮಾಡುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟೇಶ್.ಟಿ ಸೂಚನೆ ನೀಡಿದರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ನಗರಸಭೆ, ಪುರಸಭೆ, ಸ್ಥಳೀಯ ಸಂಸ್ಥೆಗಳು ಸೇರಿದಂತೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳೊಂದಿಗೆ ಕೈ ಜೋಡಿಸಿ ಆಹಾರ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಹೋಟೆಲ್ ಹಾಗೂ ಬೀದಿ ಬದಿಯ ಆಹಾರ ಪದಾರ್ಥಗಳ ಮಾರಾಟ ಮಾಡುವ ಸ್ಥಳಗಳಿಗೆ ಭೇಟಿ ನೀಡಿ ನಿಯಮಿತವಾಗಿ ಗುಣಮಟ್ಟ ಹಾಗೂ ಸ್ವಚ್ಛತೆ ಬಗ್ಗೆ ತಪಾಸಣೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಪ್ರತಿ ಅಂಗನವಾಡಿ ಕಾರ್ಯಕರ್ತೆರ ಆಹಾರ ಸುರಕ್ಷತಾ ನೊಂದಣಿ ಶುಲ್ಕ 100 ರೂ. ಗಳನ್ನು ಬಾಲ ವಿಕಾಸ ಸಮಿತಿಯಿಂದ ಭರಿಸಲಾಗುವುದು. ತಪ್ಪದೇ ಎಲ್ಲಾ ಅಂಗನವಾಡಿಗಳ ನೊಂದಣಿ ಮಾಡಿಸಲು ಕ್ರಮ ವಹಿಸುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ತಿಳಿಸಿದರು.

ಜಿಲ್ಲೆಯಲ್ಲಿ ಇದುವರೆಗೂ 7,061 ಆಹಾರ ಸುರಕ್ಷತೆ ನೊಂದಣಿಯಾಗಿವೆ. ಹೊಸದಾಗಿ 2,363 ಅರ್ಜಿಗಳು ನೊಂದಣಿಗಾಗಿ ಸಲ್ಲಿಕೆಯಾಗಿವೆ. ಇದರಲ್ಲಿ 1,030 ನೊಂದಣಿಯಾಗಿವೆ. 1,333 ನೊಂದಣಿ ಪ್ರಗತಿಯಲ್ಲಿದೆ. ಕಳೆದ ಏಪ್ರಿಲ್ 2023 ರಿಂದ ಜನವರಿ 2024 ವರೆಗೆ ಜಿಲ್ಲೆಯಾದ್ಯಂತ 5,776 ಸ್ಥಳ ಭೇಟಿ ಹಾಗೂ ತಪಾಸಣೆ ಕೈಗೊಳ್ಳಲಾಗಿದೆ. 989 ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ. ಆಹಾರ ಸುರಕ್ಷತೆ ಕಾಪಾಡಿಕೊಳ್ಳದ ಹಿನ್ನಲೆಯಲ್ಲಿ 500 ನೋಟಿಸುಗಳನ್ನೂ ನೀಡಲಾಗಿದೆ.145 ಆಹಾರ ಮಾದರಿಗಳನ್ನು ಸಂಗ್ರಹಿಸಿ ತಪಾಸಣೆಗೆ ಒಳಪಡಿಸಲಾಗಿದೆ. 3 ಮಾದರಿಗಳು ಕಲುಷಿತಗೊಂಡಿರುವ ವರದಿ ಬಂದಿವೆ, ಈ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯಲ್ಲಿ ಉಲ್ಲಂಘನೆಯ 27 ಪ್ರಕರಣ ದಾಖಲಿಸಿ ರೂ.44,000 ದಂಡ ವಸೂಲು ಮಾಡಲಾಗಿದೆ. ಪ್ರಸಕ್ತ ಅವಧಿಯಲ್ಲಿ 4 ಪ್ರಕರಣಗಳು ಜಿಲ್ಲಾ ನ್ಯಾಯಾಲಯದಲ್ಲಿದ್ದು, 2013 ರಿಂದ 130 ಪ್ರಕರಣಗಳಲ್ಲಿ 2.61 ಲಕ್ಷ ರೂ. ದಂಡ ವಿಧಿಸಲಾಗಿದೆ. ಜೆಎಂಎಫ್‌ಸಿ ನ್ಯಾಯಾಲಯದಲ್ಲಿ 2013 ರಿಂದ 10 ಪ್ರಕರಣಗಳು ಇದ್ದು, ಇದರಲ್ಲಿ 6 ಪ್ರಕರಣಗಳ ವಿಚಾರಣೆ ಪ್ರಗತಿಯಲ್ಲಿದೆ. 04 ಪ್ರಕರಣಗಳು ಇತ್ಯರ್ಥವಾಗಿವೆ. ಆಹಾರ ಕಲಬೆರಕೆ ಹಾಗೂ ಸುರಕ್ಷತಾ ಮಾನದಂಡ ಉಲ್ಲಂಘನೆ ಅಡಿ ಒಂದು ಪ್ರಕರಣದಲ್ಲಿ ಆರೋಪಿಗೆ ಒಂದು ತಿಂಗಳ ಜೈಲು ಶಿಕ್ಷೆಯಾಗಿದೆ. ಉಳಿದ ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ ಎಂದು ಜಿಲ್ಲಾ ಆಹಾರ ಸುರಕ್ಷತಾ ಅಂಕಿತಾಧಿಕಾರಿ ಡಾ. ಪಾಲಾಕ್ಷ ಸಭೆಗೆ ಮಾಹಿತಿ ನೀಡಿದರು.

ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಭದ್ರಾ ಯೋಜನೆಗಾಗಿ ನಾಯಕನಹಟ್ಟಿ ಬಂದ್

» ನಾಯಕನಹಟ್ಟಿ

ಭದ್ರಾ ಯೋಜನೆ ಶೀಘ್ರ ಕಾರ್ಯ ಅನುಷ್ಠಾನಕ್ಕೆ ಆಗ್ರಹಿಸಿ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಮಂಗಳವಾರ ಕರೆ ನೀಡಿದ್ದ ನಾಯಕನಹಟ್ಟಿ ಬಂದ್ ಸಂಪೂರ್ಣ ಯಶಸ್ವಿಗೊಂಡಿದೆ. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ಹಣ ಬಿಡುಗಡೆ ಮಾಡದೇ ಕೇಂದ್ರ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಕರುನಾಡು ವಿಜಯ ಸೇನೆ ಜಿಲ್ಲಾಧ್ಯಕ್ಷರಾದ ಕೆ. ಟಿ. ಶಿವಕುಮಾರ್ ಆರೋಪಿಸಿದರು.ನಾಯಕನಹಟ್ಟಿ ಪಟ್ಟಣದ ವಾಲ್ಮೀಕಿ ವೃತ್ತದಲ್ಲಿ ನೀರಾವರಿ ಹಾಗೂ ಸಾಮಾಜಿಕ ಹೋರಾಟ ಸಮಿತಿ ವತಿಯಿಂದ ಮಂಗಳವಾರ ಬಂದ್ ಕಾರ್ಯಕ್ರಮದಲ್ಲಿ ಮಾತನಾಡಿದವರು.

ಪುಟ 2



## ಹೆಬ್ಬೆಟ್ಟು ಸ್ವೀಕರಿಸಿ ಪಡಿತರ ನೀಡದ ನ್ಯಾಯಬೆಲೆ ಅಂಗಡಿ ವಿರುದ್ಧ ಪ್ರತಿಭಟನೆ

**ಚಳ್ಳಕೆರೆ:** ನಗರದ 17ನೇ ವಾರ್ಡ್‌ನಲ್ಲಿರುವ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರಾರರಿಗೆ ಪಡಿತರವನ್ನು ವಿತರಿಸುವಲ್ಲಿ ತಾರತಮ್ಯವೆಸಗುತ್ತಿದ್ಧಾರೆ. ಪಡಿತರ ಪಡೆಯುವ ಸಂದರ್ಭದಲ್ಲಿ ಹೆಬ್ಬಟ್ಟು ಹಾಕಿಸಿಕೊಂಡು ನಂತರ ಪಡಿತರವಿಲ್ಲವೆಂದು ಸಬೂಬು ಹೇಳಿ ವಾಪಾಸ್ ಕಳಿಸುತ್ತಾರೆ. ಇದರಿಂದ ಪ್ರತಿತಿಂಗಳು ಹಲವಾರು ಪಡಿತರದಾರರಿಗೆ ತೊಂದರೆಯಾಗುತ್ತಿದ್ದು, ನ್ಯಾಯಬೆಲೆ ಅಂಗಡಿ ವಿತರಣೆ ಕುರಿತು ತನಿಖೆ ನಡೆಸಬೇಕು ಹಾಗೂ ಅಲ್ಲಿನ ಎಲ್ಲಾ ಪಡಿತರದಾರರಿಗೆ ಸಕಾಲದಲ್ಲಿ ಪಡಿತರ ವಿತರಣೆಯಾಗಬೇಕೆಂದು ಒತ್ತಾಯಿಸಿ ಅಂಬೇಡ್ಕರ್ ನಗರ ವ್ಯಾಪ್ತಿಯ 17ನೇ ವಾರ್ಡ್ ನಿವಾಸಿಗಳು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಿಳೆಯರು ನಗರದಲ್ಲೇ ಇರುವ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರದಾರರಿಗೆ ಸಕಾಲದಲ್ಲಿ ಪಡಿತರ ವಿತರಣೆ ಮಾಡದೇ ನಿರ್ಲಕ್ಷ್ಯ ವಹಿಸುತ್ತಿರುವ ಬಗ್ಗೆ ಮಾಹಿತಿ ನೀಡಿದರೂ ಇಲಾಖೆ ಅಧಿಕಾರಿಗಳು ಮಾತ್ರ ಯಾವುದೇ ಕ್ರಮ ಕೈಗೊಂಡಿಲ್ಲ. ಪ್ರತಿತಿಂಗಳು ಪಡಿತರದಾರರು ಹೆಬ್ಬೆಟ್ಟು ಹಾಕಿ ವಾಪಾಸ್ ಹೋಗುವುದೇ ಆಗಿದೆ.

ಪುಟ 2

## ಪ್ರಮುಖ ಸುದ್ದಿ

# ಸಿಎಂ, ಡಿಸಿಎಂ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದ ರಘುಮೂರ್ತಿ






ಚಿತ್ರದುರ್ಗ: ಚಳ್ಳಕೆರೆ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ನಿಗಮದ ಅಧ್ಯಕ್ಷರಾಗಿ ಟಿ.ರಘುಮೂರ್ತಿ ಅವರು ಸೋಮವಾರ ಅಧಿಕಾರ ಸ್ವೀಕಾರ ಮಾಡಿದ್ದರು.ಈ ಹಿನ್ನೆಲೆಯಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಸನ್ಮಾನಿಸುವ ಮೂಲಕ ಧನ್ಯವಾದಗಳನ್ನು ಅರ್ಪಿಸಿದರು. ಈ ಸಂದರ್ಭದಲ್ಲಿ ಹೊಸದುರ್ಗದ ಶಾಸಕರು ಹಾಗೂ ಆಹಾರ ನಿಗಮದ ಅಧ್ಯಕ್ಷರಾದ ಬಿ.ಜಿ.ಗೋವಿಂದಪ್ಪ ಉಪಸ್ಥಿತರಿದ್ದರು.

---

### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಫೆ.15ರಂದು ತರಬೇತಿ

» ಚಿತ್ರದುರ್ಗ

ರಾಜ್ಯ ಸಹಕಾರ ಮಂಡಳಿ ಹಾಗೂ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಸಂಯುಕ್ತಾಶ್ರಯದಲ್ಲಿ, ಫೆ.15ರ ಬೆಳಿಗ್ಗೆ 10.30ಕ್ಕೆ ಚಳ್ಳಕೆರೆಯ ತ್ಯಾಗರಾಜ ನಗರದ ಬಾಪೂಜಿ ಕಾಲೇಜ್ ಹತ್ತಿರ ಇರುವ ಶ್ರೀ ಕೃಷ್ಣ ವಿದ್ಯಾರ್ಥಿ ನಿಲಯದಲ್ಲಿ, ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕಿನ ಹಾಲು ಉತ್ಪಾದಕ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ನಿರ್ದೇಶಕ ಆರ್ ರಾಮರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಸಹಕಾರ ಯೂನಿಯನ್ ಪ್ರಭಾರ ಅಧ್ಯಕ್ಷ ಜಿ.ಈ. ಅಜ್ಜಪ್ಪ ಅಧ್ಯಕ್ಷತೆ ವಹಿಸುವರು. ಬೆಳಿಗ್ಗೆ 10 ರಿಂದ 10.30ರವರೆಗೆ ನೊಂದಣಿ ಪ್ರಕ್ರಿಯೆ ನಡೆಯಲಿದೆ. ಕಾರ್ಯಗಾರದಲ್ಲಿ ಶುದ್ದ ಹಾಲು ಉತ್ಪಾದನೆ ಹಾಗೂ ಇತ್ತೀಚೆಗೆ ತಿದ್ದುಪಡಿಯಾದ ಕಾನೂನಿನ ಮುಖ್ಯಾಂಶಗಳನ್ನು ಬೈಲಾದಲ್ಲಿ ಅಳವಡಿಸಿಕೊಳ್ಳುವ ಕುರಿತು ಶಿಮುಲ್ ನಿವೃತ್ತ ಸಹಾಯಕ ವ್ಯವಸ್ಥಾಪಕ ಶೇಖರಪ್ಪ, ಲೆಕ್ಕಪತ್ರ ನಿರ್ವಹಣೆ ಕುರಿತು ಶಿಮುಲ್ ನಿವೃತ್ತ ಸಹಾಯಕ ವ್ಯವಸ್ಥಾಪಕ ಶಿವಾನಂದಪ್ಪ ವಿಷಯ ಮಂಡಿಸುವರು.

### ಜಿ.ಹೆಚ್.ಲೋಕೇಶ್ ಅಧಿಕಾರ ಸ್ವೀಕಾರ

» ಚಿತ್ರದುರ್ಗ

ಜಿಲ್ಲೆಯ ಗೃಹರಕ್ಷಕ ದಳದ ಉಪ ಸಮಾದೇಷ್ಟರಾಗಿ ಜಿ.ಹೆಚ್.ಲೋಕೇಶ್ ಫೆ.2 ರಂದು ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿದ್ದಾರೆ. ಆರಕ್ಷಕ ಮಹಾ ನಿರ್ದೇಶಕರ ಮತ್ತು ಗೃಹರಕ್ಷಕದಳ ಮಹಾ ಸಮಾದೇಷ್ಟರು ಹಾಗೂ ನಿರ್ದೇಶಕರು ಪೌರರಕ್ಷಣೆ ಇವರು ಜಿ.ಹೆಚ್.ಲೋಕೇಶ್ ಅವರನ್ನು ಚಿತ್ರದುರ್ಗ ಜಿಲ್ಲಾ ಗೃಹರಕ್ಷಕದಳ ಉಪಸಮಾದೇಷ್ಟರಾಗಿ ನೇಮಿಸಿ ಆದೇಶ ಹೊರಡಿಸಿದ್ದಾರೆ.

### ಫೆ.15 ರಂದು ಸಂತ ಸೇವಾಲಾಲ್ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಇವರ ಸಹಯೋಗದಲ್ಲಿ ಫೆ.15 ರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಸಂತ ಶ್ರೀ ಸೇವಾಲಾಲ್ ಜಯಂತಿಯನ್ನು ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರು ಕೆ. ಅನ್ವರ್ ಭಾಷ ಗೌರವಾನ್ವಿತ ವ್ಯಕ್ತಿಗಳಾಗಿ ಭಾಗವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ ಗೋವಿಂದಪ್ಪ, ಟಿ. ರಘುಮೂರ್ತಿ, ಡಾ. ಎಂ. ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಜಿಲ್ಲಾ ಬಂಜಾರ ಸಂಘದ ಅಧ್ಯಕ್ಷ ಆರ್.ನಾಗೇಂದ್ರನಾಯ್ಕ, ಜಿಲ್ಲಾ ಬಂಜಾರ ಸಂಘದ ಗೌರವಾಧ್ಯಕ್ಷ ಜಿ.ರಾಜನಾಯ್ಕ, ಕಾರ್ಯದರ್ಶಿ ಕೆ.ಮಂಜುನಾಥನಾಯ್ಕ, ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರಣ್ ಕುಮಾರ್, ಗ್ರಾ.ಪಂ. ಸದಸ್ಯೆ ಕಾವ್ಯಬಾಯಿ ಹಾಗೂ ಜಿಲ್ಲೆಯ ಗೌರವಾನ್ವಿತ ಪ್ರತಿನಿಧಿಗಳು, ಬಂಜಾರ ಸಮುದಾಯದ ಸಮಸ್ತ ಗೌರವಾನ್ವಿತ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಕನ್ನಡ ಉಪನ್ಯಾಸಕ ಟಿ.ಎಲ್. ನಾರಾಯಣ್ ನಾಯ್ಕ್ ಉಪನ್ಯಾಸ ನೀಡುವರು.. ಆಯಿತೋಳ ಜಗದೀಶ್ ಮತ್ತು ತಂಡ ಗೀತಗಾಯನ ಪ್ರಸ್ತುತ ಪಡಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಫಾಸ್ಟ್ ನ್ಯೂಸ್**

## ಗ್ರಾಮೀಣ ರೈತ ಮತ್ತು ರೈತ ಮಹಿಳೆಯರಿಗೆ ತರಬೇತಿ

» **ಚಿತ್ರದುರ್ಗ**

ಕೃಷಿ ಮತ್ತು ತೋಟಗಾರಿಕೆ ಸಂಶೋಧಾ ಕೇಂದ್ರ, ಬಬ್ಬೂರು ಫಾರಂ, ಕೃಷಿ ಯಂತ್ರೋಪಕರಣಗಳ ಪರೀಕ್ಷೆ ಮತ್ತು ತರಬೇತಿ ಕೇಂದ್ರ, ಬಬ್ಬೂರು ಫಾರಂ, ದಕ್ಷಿಣ ಪ್ರಾಂತೀಯ ಕೃಷಿ ಯಂತ್ರೋಪಕರಣಗಳ ಪರೀಕ್ಷೆ ಮತ್ತು ತರಬೇತಿ ಕೇಂದ್ರ, ಗಾರಲದಿನ್ನಿ, ಅನಂತಪುರ ಹಾಗೂ ಕೃಷಿ ಇಲಾಖೆ ಚಿತ್ರದುರ್ಗ ವ್ಯಾಪ್ತಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ ಇವರುಗಳ ಸಂಯುಕ್ತಾಶ್ರಯದಲ್ಲಿ ಚಿತ್ರದುರ್ಗ ಜಿಲ್ಲೆಯ ರೈತ ಭಾಂದವರು, ರೈತ ಮಹಿಳೆಯರು ಮತ್ತು ಕೃಷಿ ಸಖಿಯವರಿಗೆ "ಆಧುನಿಕ ಕೃಷಿ ಉಪಕರಣಗಳ ಅಳವಡಿಕೆ ಮತ್ತು ನಿರ್ವಹಣೆ" ಕುರಿತು ಎರಡು ದಿನಗಳ ತರಬೇತಿ ಕಾರ್ಯಕ್ರಮ ಫೆ. 16 ರಂದು ಬೆಳಗ್ಗೆ 10:30 ಗಂಟೆಗೆ ಬಬ್ಬೂರು ಫಾರಂ ನಲ್ಲಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ದಕ್ಷಿಣ ಪ್ರಾಂತೀಯ ಕೃಷಿ ಯಂತ್ರೋಪಕರಣಗಳ ಪರೀಕ್ಷೆ ಮತ್ತು ತರಬೇತಿ ಕೇಂದ್ರ, ಗಾರಲದಿನ್ನಿ, ಅನಂತಪುರ ಇಲ್ಲಿನ ವಿಜ್ಞಾನಿ ಡಾ.ಕನಕಪ್ಪ ಮತ್ತು ತಂಡದವರು, ಬಬ್ಬೂರು ಫಾರಂನ ಕೃಷಿ ಯಂತ್ರೋಪಕರಣಗಳ ಪರೀಕ್ಷೆ ಮತ್ತು ತರಬೇತಿ ಕೇಂದ್ರದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ.ಶರಣಪ್ಪಜಂಗಂಡಿ, ಕೃಷಿ ಇಂಜಿನಿಯರಿಂಗ್, ತೋಟಗಾರಿಕೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ರಾಜಶೇಖರ ಬಾರಕೇರ, ಇವರುಗಳು ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಉಪಯೋಗಿಸುವ ಆಧುನಿಕ ಕೃಷಿ ಯಂತ್ರೋಪಕರಣಗಳ ಬಳಕೆ ಮತ್ತು ಅವುಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ಮಾಡಲಿದ್ದು, ಆಸಕ್ತ ರೈತರು ತರಬೇತಿಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಆಸಕ್ತ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂನಶ್ರೀ ರಜನೀಕಾಂತ. ಆರ್, ಸಹಾಯಕ ಕೃಷಿ ನಿರ್ದೇಶಕರು (8277931058), ಶ್ರೀಮತಿ ಉಷಾರಾಣಿ ಎಂ.ಸಹಾಯಕ ಕೃಷಿ ನಿರ್ದೇಶಕರು, (ರೈತ ಮಹಿಳೆ) (9980730696),ಟಿ.ಪಿ. ರಂಜಿತಾ, ಕೃಷಿ ಅಧಿಕಾರಿ (8277930959) ಮತ್ತು ಪವಿತ್ರಾ ಎಂ. ಜೆ. (9535412286) ಹಾಗೂ ವಲಯ ಕೃಷಿ ಮತ್ತುತೋಟಗಾರಿಕೆ ಸಂಶೋಧಾಕೇಂದ್ರ, ಬಬ್ಬೂರು ಫಾರಂನರವಿಕುಮಾರ್, ಸಹಾಯಕರು (9036880652) ಸಿದ್ರಾಮಪ್ಪ, ಕೃಷಿ ಇಂಜಿನಿಯರ್ (8088230792) ರವರದೂರವಾಣಿ ಸಂಖ್ಯೆಗೆಕರೆ ಮಾಡಿ ನೋಂದಾಯಿಸಿಕೊಳ್ಳಲು ಕೋರಿದೆ. ತರಬೇತಿಗೆ ಹಾಜರಾಗುವ ಕೃಷಿ ಸಖಿಯವರು ತಮ್ಮ ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ ಹಾಜರಾಗಬೇಕು. ಮೊದಲು ನೋಂದಾವಣಿ ಮಾಡಿಕೊಂಡ 100 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ಬಬ್ಬೂರು ಸಹಾಯಕ ಕೃಷಿ ನಿರ್ದೇಶಕ ರಜನಿಕಾಂತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಪಿಎಂಸಿಗಳಲ್ಲಿ ಕೃಷಿ ಉತ್ಪನ್ನಗಳ ಮಾರಾಟಕ್ಕೆ ರೈತರಿಗೆ ಮನವಿ

» **ಚಿತ್ರದುರ್ಗ**

ರೈತರು ತಾವು ಬೆಳೆದ ಕೃಷಿ ಉತ್ಪನ್ನಗಳನ್ನು ಎಪಿಎಂಸಿಗಳಲ್ಲಿ ಮಾರಾಟ ಮಾಡಬೇಕು. ಈ ಸಂದರ್ಭದಲ್ಲಿ ದಲ್ಲಾಳಿಗಳಿಗೆ ಕಮಿಷನ್ ನೀಡದೆ, ಬಿಳಿ ಚೀಟಿಯನ್ನು ತಿರಸ್ಕರಿಸಿ ಅಧಿಕೃತ ಲೆಕ್ಕ ತಿರುವಳಿ ಪಟ್ಟಿಯನ್ನು ಕೇಳಿ ಪಡೆಯಬೇಕು. ಎಲೆಕ್ಟ್ರಾನಿಕ್ ಯಂತ್ರಗಳ ಮೂಲಕ ತೂಕ ಮಾಡಿಸಿದ ನಂತರ ಹಣ ಕೇಳಿ ಪಡೆಯುವ ಮೂಲಕ ಕೃಷಿ ಉತ್ಪನ್ನಗಳಿಗೆ ರೈತರು ಸ್ಪರ್ಧಾತ್ಮಕ ಬೆಲೆ ಪಡೆಯಬಹುದಾಗಿದೆ. ಮಾರಾಟ ಸಮಯದಲ್ಲಿ ಸಮಸ್ಯೆಗಳು ಉದ್ಭವಿಸಿದಲ್ಲಿ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಚಿತ್ರದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ತಿಳಿಸಿದ್ದಾರೆ.

## ಹೆಬ್ಬೆಟ್ಟು ಸ್ವೀಕರಿಸಿ ಪಡಿತರ ನೀಡದ ನ್ಯಾಯಬೆಲೆ ಅಂಗಡಿ ವಿರುದ್ಧ ಪ್ರತಿಭಟನೆ

» **ಮೊದಲ ಪುಟದಿಂದ**

ಹೆಬ್ಬೆಟ್ಟು ಕೊಟ್ಟರೂ ಪಡಿತರ ಕೊಡದೆ ಜನರನ್ನು ವಾಪಾಸ್ ಕಳಿಸಲಾಗುತ್ತಿದೆ. ಆದ್ದರಿಂದ ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಅಲ್ಲಿನ ಎಲ್ಲಾ ಪಡಿತರದಾರರು ಪ್ರತಿತಿಂಗಳು ಸರ್ಕಾರದ ನಿಗದಿಪಡಿಸಿದ ಪಡಿತರವನ್ನು ಕಾರ್ಡ್‌ದಾರರು ಪಡೆಯುವಂತೆ ಮಾಡಬೇಕು. ತೂಕದಲ್ಲೂ ಸಹ ತುಂಬಾ ವ್ಯತ್ಯಸವಾಗುತ್ತಿದ್ದು, ಮೂರು ಕೆ.ಜೆ ಅಕ್ಕಿ, ಎರಡು ಕೆ.ಜಿ.ರಾಗಿಕೊಟ್ಟರೆ ಅದೂ ಸಹ ಕಡಿಮೆ ಇರುತ್ತದೆ. ಈ ನ್ಯಾಯಬೆಲೆ ಅಂಗಡಿಯ ಪಡಿತರ ವಿತರಣೆಯಲ್ಲಿ ದೊಡ್ಡ ಪ್ರಮಾಣದ ಲೋಪವಿದ್ದು ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಆಹಾರ ಇಲಾಖೆ ಇನ್ಸ್‌ಪೆಕ್ಟರ್ ಶ್ರೀನಿವಾಸ್ ಈ ಬಗ್ಗೆ ಇದುವರೆಗೂ ಯಾವುದೇ ದೂರು ಬಂದಿಲ್ಲ. ನೀವು ಈದಿನ ಬಂದು ಅಲ್ಲಿನ ನ್ಯಾಯಬೆಲೆ ಅಂಗಡಿ ವಿತರಣೆಯ ಬಗ್ಗೆ ತಿಳಿಸಿದ ಎಲ್ಲಾ ಲೋಪದೋಷಗಳ ಬಗ್ಗೆ ನ್ಯಾಯಬೆಲೆ ಅಂಗಡಿ ಮಾಲೀಕ ಮಲ್ಲೇಶ್‌ರವರಿಗೆ ಮೌಖಿಕ ತಿಳುವಳಿಕೆ ನೀಡಲಿದ್ದು, ಮುಂದಿನ ಯಾವುದೇ ಸಮಸ್ಯೆಯಾದರೆ ಕ್ರಮ ಕೈಗೊಳ್ಳುವುದಾಗಿ ತಿಳಿಸಲಾಗಿದೆ.

# ಸರ್ಕಾರಿ ನೌಕರರು ಸರ್ಕಾರದ ನಿಯಮಾವಳಿ ಅರಿತು ಕಾರ್ಯನಿರ್ವಹಿಸಿ: ಜಿಲ್ಲಾಧಿಕಾರಿ

» **ದಾವಣಗೆರೆ**

ಪ್ರತಿಯೊಬ್ಬ ಸರ್ಕಾರಿ ನೌಕರರು ಸರ್ಕಾರದ ಸೇವಾ ನಿಯಮ ಹಾಗೂ ಸರ್ಕಾರದ ನಿಯಮಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ.ಎಂ.ವಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಕುಂದು ಕೊರತೆಗಳ ಜಂಟಿ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಸಭೆಯಲ್ಲಿ ಹಲವಾರು ವಿಷಯಗಳ ಬಗ್ಗೆ ಚರ್ಚಿಸಿ ನಾವೆಲ್ಲರೂ ಜನಪರ ನಿರ್ಧಾರ ಕೈಗೊಂಡು ಕೆಲಸ ಮಾಡಬೇಕು. ಸರ್ಕಾರಿ ನೌಕರರು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಇದಕ್ಕಾಗಿ ಕ್ರೀಡೆ, ಮನರಂಜನಾ ಕೂಟಗಳಲ್ಲಿ ಭಾಗವಹಿಸಬೇಕು. ಸರ್ಕಾರಿ ನೌಕರರ ಸಂಘದಿಂದ ಪ್ರಸಕ್ತ ಸಾಲಿನ ಕ್ರೀಡಾ ಕೂಟ ಹಮ್ಮಿಕೊಂಡಿದ್ದು, ಇದರಲ್ಲಿ ವೈಯಕ್ತಿಕ ಕ್ರೀಡೆಗಳು, ಗುಂಪು ಕ್ರೀಡೆಗಳು, ಸಾಂಸ್ಕೃತಿಕ ಸ್ಪರ್ಧೆ ಇರಲಿವೆ. ಎಲ್ಲ ಸಿಬ್ಬಂದಿ ಮತ್ತು ಅಧಿಕಾರಿಗಳು ಕ್ರೀಡಾಕೂಟದಲ್ಲಿ ಭಾಗವಹಿಸಬೇಕು ಎಂದರು.



ಜಿಲ್ಲಾಡಳಿತ ಭವನದಲ್ಲಿ ಅವಧಿ ಮೀರಿ ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. ಇವರು ಸಂಜೆ ಮನೆಗೆ ತೆರಳಲು ಇಲ್ಲಿಂದ ಸಿಟಿ ಬಸ್ ಬಿಡಲು ನೌಕರರು ಮನವಿ ಮಾಡಿದಾಗ ಪ್ರತಿನಿತ್ಯ ಸಂಜೆ 2 ಕೆಎಸ್‌ಆರ್‌ಟಿಸಿ ಸಿಟಿಬಸ್ ಗಳನ್ನು ಬಿಡಲು ಸೂಚಿಸಲಾಗುತ್ತದೆ ಎಂದರು.

ವಿವಿಧ ಕಚೇರಿಗಳಿಗೆ ದಾಖಲೆ ಕೋರಿ ಸಲ್ಲಿಸುವ ಮಾಹಿತಿ ಹಕ್ಕು ಅರ್ಜಿಗಳಿಗೆ ನಿಯಮಾನುಸಾರ ದಾಖಲೆ ಒದಗಿಸಿ ಕಾಲಮಿತಿಯಲ್ಲಿ ವಿಲೇ ಮಾಡಬೇಕು, ಯಾವುದೇ ಕಾರಣಕ್ಕೂ ಅರ್ಜಿಗಳನ್ನು ಅವಧಿ ನಂತರ ಇಟ್ಟುಕೊಳ್ಳುವುದು ತಪ್ಪಾಗುತ್ತದೆ ಎಂದರು.

ಸರ್ಕಾರಿ ನೌಕರರಿಗೆ ವಸತಿ ಗೃಹ ನೀಡಲು ಒಂದು ಮಹಡಿಯಲ್ಲಿ 10 ಮನೆಗಳಂತೆ ಒಟ್ಟು 90 ಮನೆಗಳನ್ನು ನಿರ್ಮಿಸಲು ಲೋಕೋಪಯೋಗಿ ಇಲಾಖೆಗೆ ಸೂಚನೆ ನೀಡಲಾಗಿದೆ. ಮತ್ತು ನೌಕರರ ಆರೋಗ್ಯ ಹಿತದೃಷ್ಠಿಯಿಂದ ಇ.ಸಿ.ಜಿ, ರಕ್ತದೊತ್ತಡ ಪರೀಕ್ಷೆ, ಮಧುಮೇಹದ ಪರೀಕ್ಷೆಯನ್ನು 3 ತಿಂಗಳಿಗೊಮ್ಮೆ ಮಾಡಿ ನೌಕರರ ಆರೋಗ್ಯ ತಪಾಸಣೆ ಮಾಡಲು ಆರೋಗ್ಯ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಕ್ಯಾಂಟಿನ್ ಸ್ಥಾಪನೆ ಮಾಡಬೇಕೆಂದಾಗ ಇದನ್ನು ಪರಿಶೀಲಿಸಿ ಕಾರ್ಯರೂಪಕ್ಕೆ ತರಲಾಗುತ್ತದೆ. ಜಿಲ್ಲಾಡಳಿತ ಭವನದಲ್ಲಿ ಸಿಬ್ಬಂದಿ ವರ್ಗದವರಿಗೆ ದ್ವಿಚಕ್ರವಾಹನಗಳ ನಿಲುಗಡೆಗಾಗಿ ಮಾಡುವ ಸ್ಥಳದ ಬಗ್ಗೆ ಪರಿಶೀಲನೆ ಮಾಡಿ ಸೂಕ್ತವಾದ ವ್ಯವಸ್ಥೆಯನ್ನು ಮಾಡಿಕೊಡಲಾಗುತ್ತದೆ ಎಂದರು. ಸಂವಿಧಾನದ ಪ್ರಸ್ತಾವನೆ ಓದುವ ಮೂಲಕ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಧ ವಿರೇಶ್ ಎಸ್ ಒಡೆನಪುರ ಮಾತಾನಾಡಿ ಸರ್ಕಾರಿ ನೌಕರರ ಮಹಾಸಮ್ಮೇಳವನ್ನು ಫೆ.27 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿದೆ. ಕಾರ್ಯಕ್ರಮಕ್ಕೆ 25 ರಿಂದ 30 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಜೊತೆಗೆ ನೌಕರರಿಗೆ ಓ.ಓ.ಡಿ.ಸೌಲಭ್ಯವಿದೆ ಎಂದರು.

ಜಿಲ್ಲಾಪಂಚಾಯತ್‌ಉಪಕಾರ್ಯದರ್ಶಿ ಕೃಷ್ಣನಾಯ್ಕ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ನಾಗರಾಜ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಿಕಿ ಜಯಲಕ್ಷ್ಮೀ ಬಾಯಿ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಚಂದ್ರಶೇಖರ್ ಸುಂಕದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ವಾಸಂತಿ ಉಪ್ಪಾರ್, ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಧ್ಯಕ್ಷ ಪಾಲಾಕ್ಷಿ ಹಾಗೂ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನೀರು ಸಂಸ್ಕರಣಾ ಘಟಕ ಪರಿಶೀಲನೆ

» **ದಾವಣಗೆರೆ**

ಹರಿಹರ ನಗರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ಪೂರೈಕೆ ಮಾಡುವ ಶುದ್ದೀಕರಣ ಘಟಕದ ಪರಿಶೀಲನೆಯನ್ನು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ಅವರು ಮಂಗಳವಾರ ಕೈಗೊಂಡರು.

ಬೇಸಿಗೆ ಆರಂಭವಾಗುತ್ತಿದ್ದು ಕುಡಿಯುವ ನೀರನ್ನು ಶುದ್ದೀಕರಣ ಮಾಡಿ ಪೂರೈಕೆ ಮಾಡಬೇಕು, ಇಲ್ಲದಿದ್ದಲ್ಲಿ ಹಲವಾರು ಅನಾರೋಗ್ಯಕ್ಕೆ ಕಾರಣಗವುದರಿಂದ ಶುದ್ದೀಕರಣ ಘಟಕದಲ್ಲಿ ನೀರಿಗೆ ಕ್ಲೋರಿನೇಷನ್ ಮಾಡುವ ಮೂಲಕ ಪೂರೈಕೆ ಮಾಡಬೇಕು. ಮತ್ತು ಬೇಸಿಗೆ ಆರಂಭವಾಗಿದ್ದು ನೀರನ್ನು ಮಿತವಾಗಿ ಹಾಗೂ ನಿರಂತರವಾಗಿ ನೀರು ಪೂರೈಕೆ ಮಾಡಲು ಎಲ್ಲಾ ಸಿದ್ದತೆ ಮಾಡಿಕೊಳ್ಳಲು ಸೂಚನೆ ನೀಡಿದರು.

ಇ-ಖಾತಾ ಆಂದೋಲನಾ; ಜಿಲ್ಲಾಧಿಕಾರಿಯವರ ಸೂಚನೆಯಂತೆ ನಮ್ಮ ಖಾತೆ, ನಮ್ಮ ಹಕ್ಕು, ನಮ್ಮ ದಾಖಲೆ ನಮ್ಮ ಹಕ್ಕು ಘೋಷಣೆಯನ್ವಯ ಹರಿಹರ ನಗರಸಭೆ ವ್ಯಾಪ್ತಿಯಲ್ಲಿ ಜನರಿಗೆ ಅನುಕೂಲವಾಗಲು ಇ-ಖಾತೆ ಆಂದೋಲನದ ಮೂಲಕ ಮನೆ ಮನೆಗೂ ಇ-ಸ್ವತ್ತು ತಲುಪಿಸುವ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಆಸ್ತಿ ತೆರಿಗೆ ಪಾವತಿಸಿದ ಎಲ್ಲಾ ಖಾತೆದಾರರಿಗೆ ಇ-ಸ್ವತ್ತು ದಾಖಲೆ ನೀಡಲಾಗುತ್ತದೆ. ಇದಕ್ಕಾಗಿ ಗುತ್ತೂರು ಸತ್ಯ ಗಣಪತಿ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಂಡಿರುವ ಆಂದೋಲನಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ನಾಗರೀಕರಿಗೆ ಇ-ಸ್ವತ್ತು ಪ್ರಮಾಣಪತ್ರ ವಿತರಿಸಿದರು.



ಹೊಸ ನಗರಸಭೆ ಕಟ್ಟಡ ಪರಿಶೀಲನೆ; ಹರಿಹರ ನಗರಸಭೆ ಹೊಸ ಕಟ್ಟಡವನ್ನು 4 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಈ ಕಟ್ಟಡ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿ ಗುಣಮಟ್ಟದ ಕಾಮಗಾರಿ ಜೊತೆಗೆ ನಿಗಧಿತ ಕಾಲಾವಧಿಯಲ್ಲಿ ಕಟ್ಟಡ ನಿರ್ಮಿಸಿಕೊಡಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ನೀರಿನ ಹರಿವು ಪರಿಶೀಲನೆ; ಭದ್ರಾ ಜಲಾಶಯದಿಂದ ಬಹುಗ್ರಾಮ ಕುಡಿಯುವ ನೀರಿನ ಯೋಜನೆ, ಮೈಲಾರ ಜಾತ್ರಾ ಮಹೋತ್ಸವದ ಉದ್ದೇಶಕ್ಕೆ ತುಂಗಭದ್ರಾ ನದಿಗೆ ನೀರು ಬಿಡಲಾಗಿದ್ದು ನೀರಿನ ಹರಿವು ಬಗ್ಗೆ ಅಧಿಕಾರಿಗಳೊಂದಿಗೆ ಹರಿಹರದ ಸಮೀಪ ಪರಿಶೀಲನೆ ನಡೆಸಿದರು.

ಈ ವೇಳೆ ನಗರಾಭಿವೃದ್ದಿಕೋಶ ಯೋಜನಾ ನಿರ್ದೇಶಕ ಮಹಂತೇಶ್, ತಹಶೀಲ್ದಾರ್ ಗುರುಬಸವರಾಜ್, ನಗರಸಭೆ ಆಯುಕ್ತರಾದ ಬಸವರಾಜ್ ಐಗೂರು ಉಪಸ್ಥಿತರಿದ್ದರು.

## ಭದ್ರಾ ಯೋಜನೆಗಾಗಿ ನಾಯಕನಹಟ್ಟಿ ಬಂದ್ ಯಶಸ್ವಿ

» **ಮೊದಲ ಪುಟದಿಂದ**

ಚಿತ್ರದುರ್ಗ ಜಿಲ್ಲೆಯ ಜನರಿಗೆ ಮಲತಾಯಿ ಧೋರಣೆ ತೋರಿಸುವಲ್ಲಿ ಯಶಸ್ವಿಯಾಗಿದೆ. ಕೇಂದ್ರ ಸಚಿವರಾದ ನಾರಾಯಣಸ್ವಾಮಿ ಪ್ರಧಾನಿಗಳ ಹತ್ತಿರ ಬಳಿ ಹೋಗಿ ಸಮಾಲೋಚಿಸಿ? ಬರುವ ಮಾರ್ಚ್ ತಿಂಗಳಲ್ಲಿ ಹಣವನ್ನು ಬಿಡುಗಡೆ ಮಾಡಿಸಿ ಚಿತ್ರದುರ್ಗ ಜಿಲ್ಲೆಯ ಜನರ ಋಣವನ್ನು ತೀರಿಸಬೇಕು ಇಲ್ಲದೆ ಹೋದರೆ ರಾಜನಾಮೆಯನ್ನು ಕೊಟ್ಟು ತಮ್ಮ ಕ್ಷೇತ್ರದ ಆನೇಕಲ್‌ಗೆ ನಮ್ಮಿಂದ ಬೀಳ್ಕೊಡುಗೆ ಪಡೆದು ಸೀರೆ ಬಳೆ ಕೊಡ್ತೀವಿ ಅದನ್ನು ತೆಗೆದುಕೊಂಡು ಹೋಗಿ ಎಂದು ನೇರವಾಗಿ ಗುಡುಗಿದರು. ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಬಾಲರಾಜ್ ಮಾತನಾಡಿ ಕೇಂದ್ರ ಮತ್ತು ರಾಜ್ಯ ಸರ್ಕಾರ ತುರ್ತಾಗಿ ಹಣ ಬಿಡುಗಡೆ ಮಾಡಬೇಕು ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಬೇಗ ಮುಗಿಸಿ ಕೆರೆಗಳಿಗೆ ನೀರು ತರಿಸುವಂತಹ ಕೆಲಸ ಮಾಡಬೇಕು ಎಂದು ತಿಳಿಸಿದರು. ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿಯವರು ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ಹಣ ಬಿಡುಗಡೆ ಮಾಡುತ್ತೇನೆಂದು ಹೇಳಿ ಹೋಗಿದ್ದರು ಆದರೆ ಹಣ ಬಿಡುಗಡೆ ಮಾಡಲಿಲ್ಲ ಮಾತು ತಪ್ಪಿದ ನರೇಂದ್ರ ಮೋದಿ ಎಂದು ಬಣ್ಣಿಸಿದರು.ನೀರಾವರಿ ಹೋರಾಟ ಸಮಿತಿ ಅಧ್ಯಕ್ಷರಾದ ಮುದಿಯಪ್ಪ ಮಾತನಾಡಿ ನಾಯಕನಹಟ್ಟಿ ಹೋಬಳಿ 13,000 ಕ್ಕೆ ಹೆಚ್ಚು ಪ್ರದೇಶವನ್ನು ಬಿಟ್ಟು ಕೊಟ್ಟಿದ್ದೇವೆ ಹೋಬಳಿಯ ಜನರ ಈ ತ್ಯಾಗಕ್ಕೆ ಬೆಲೆ ಕಟ್ಟಲಾಗದು ಭೂಮಿ ತ್ಯಾಗ ಮಾಡಿರುವ ಇಲ್ಲಿನ ಸಮುದಾಯದಗಳಿಗೆ ಪರ್ಯಾಯವಾಗಿ ಬದುಕು ಕಟ್ಟಿಕೊಡುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಪ್ರಯತ್ನ ಮಾಡಿಲ್ಲ ಎಂಬುದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು

ಪಾದಗೆಟ್ಟೆಯಿಂದ ಒಳ ಮಠ ಅಂಬೇಡ್ಕರ್ ಸರ್ಕಲ್ ನಾಯಕನಹಟ್ಟಿಯ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು. ಉಪತಹಸೀಲ್ದಾರ್ ಶಕುಂತಲಾ ಬಿ ಅವರಿಗೆ ನೀರಾವರಿ ಹೋರಾಟ ಸಮಿತಿವತಿಯಿಂದ ಮನವಿಯನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಪಟೇಲ್ ಜಿಎಂ ತಿಪ್ಪೇಸ್ವಾಮಿ, ಬಸವ ರೆಡ್ಡಿ, ಯಾದವ್ ರೆಡ್ಡಿ, ನಿಜಲಿಂಗ, ಭೂತಯ್ಯ, ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ನಾಯಕನಹಟ್ಟಿ ಹೋಬಳಿ ಅಧ್ಯಕ್ಷರು ಈ ನಾಗರಾಜ್ ಮೀಸೆ, ಜಿಲ್ಲಾ ಕಾರ್ಯದರ್ಶಿ ನವೀನ, ಜಿಲ್ಲಾ ಉಪಾಧ್ಯಕ್ಷರು ಪಟೇಲ್ ಮಲ್ಲಿಕಾರ್ಜುನ , ತಾಲ್ಲೂಕು ಅಧ್ಯಕ್ಷರು ಎಸ್ ಪ್ರಸನ್ನ, ಈ ಸಂದರ್ಭದಲ್ಲಿ ಬಂದ್‌ಗೆ 33 ಸಂಘಟನೆಗಳ ಅಧ್ಯಕ್ಷರು ಹಾಗೂ ಕಾರ್ಯಕರ್ತರು, ಎತ್ತು ಗಾಡಿ, ಟ್ರ್ಯಾಕ್ಟರ್, ಕುರಿ-ಮೇಕೆ ಹಾಗೂ ಪ್ರಮುಖ ರೈತರು, ಹಾಗೂ ನೀರಾವರಿ ಹೋರಾಟ ಸಮಿತಿಯ ಅಧ್ಯಕ್ಷರು ಮತ್ತು ಪಧಾಧಿಕಾರಿಗಳು, ಪಟ್ಟಣ ಪಂಚಾಯ್ತಿ ಸದಸ್ಯರು, ಪೋಲಿಸ್ ಇಲಾಖೆಯವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಬೆಂಬಲ ಸೂಚಿಸಿದರು.

# ಸಂಗೀತಕ್ಕೆ ಅಳಿಸುವ ನಗಿಸುವ,ಮಳೆ ಬರಿಸುವ ಶಕ್ತಿ ಇದೆ

» **ಹೊಸದುರ್ಗ**

ಸಂಗೀತಕ್ಕೆ ಅದ್ಭುತವಾದ ಶಕ್ತಿ ಇದೆ, ಸಂಗೀತಕ್ಕೆ ಅಳಿಸುವ ನಗಿಸುವ ,ಮಳೆ ಬರಿಸುವ , ಮನುಷ್ಯನನ್ನು ವಿಶ್ವಮಾನವನನ್ನಾಗಿಸುವ ಶಕ್ತಿ ಇದೆ ಆದರೆ ಸಾಧನೆ ಬೇಕು ,ಪ್ರೋತ್ಸಾಹವು ಬೇಕು ಅಂತ ಒಂದು ಅಪರೂಪದ ಕಾರ್ಯಕ್ರಮ ಇದಾಗಿದೆ ಎಂದು



ಸದ್ಗುರು ಆಯುರ್ವೇದ ಸಂಸ್ಥೆಯ ಮುಖ್ಯಸ್ಥರಾದ ಡಿ .ಎಸ್ . ಪ್ರದೀಪ್ ತಿಳಿಸಿದರು. ತಾಲೂಕಿನ ಗವಿರಂಗನಾಥಸ್ವಾಮಿ ಬೆಟ್ಟದಲ್ಲಿ ಆಯೋಜಿಸಲಾಗಿದ್ದ ತ್ಯಾಗರಾಜರ ಆರಾಧನಾ ಮಹೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜ ಸೇವಕರಾದ ದಿಲ್ ಸೆ ದಿಲೀಪ್ ಮಾತನಾಡಿ ಆಧುನಿಕತೆ ಯಿಂದ ನಮ್ಮ ದಾಸಶ್ರೇಷ್ಠರು ವಚನಕಾರರು ಕೊಟ್ಟ ಸಂಗೀತ ,ಸಾಹಿತ್ಯ ಕೊಡುಗೆ ಅಪಾರ ಇಂದು ಇಂತಹ ಕಾರ್ಯಕ್ರಮ ನಮ್ಮಿಂದ ಬಹುದೂರ ಉಳಿದಿದೆ ಮತ್ತೆ ಮತ್ತೆ ನಾವು ನಮ್ಮ ಪರಂರೆಯ ಕಲೆಗಳನ್ನು ಉಳಿಸಲು ಇಂತಹ ಕಾರ್ಯಕ್ರಮ ಹೆಚ್ಚು ನಡೆಯಂತಾಗಲಿ ನಾವು ಜೊತೆಗಿರುತ್ತೇವೆ ಎಂದು ತಿಳಿಸಿದರು.

**ಪ್ರಮುಖ ಸುದ್ದಿ**

### ಪರಿಸರ ರಕ್ಷಣೆಯ ಧ್ಯೇಯದೊಂದಿಗೆ ರಸ್ತೆ ಸುರಕ್ಷತಾ ಸಪ್ತಾಹ

# ಜನಜಾಗೃತಿ ಎಲ್.ಇ.ಡಿ.ವಾಹನಕ್ಕೆ ಡಿಸಿ ಹಸಿರು ನಿಶಾನೆ

» **ಚಿತ್ರದುರ್ಗ**

ವಾಯು ಮಾಲಿನ್ಯ, ಪರಿಸರ ಮಾಲಿನ್ಯ ತಡೆಗಟ್ಟುವುದು ಹಾಗೂ ರಸ್ತೆ ಸಂಚಾರ ನಿಯಮಗಳ ಪಾಲನೆ ಕುರಿತಂತೆ ಜನರಲ್ಲಿ ಜಾಗೃತಿ ಹಾಗೂ ಅರಿವು ಮೂಡಿಸಲು ಸಾರಿಗೆ ಇಲಾಖೆಯು ವಿವಿಧ ಇಲಾಖೆಗಳ ಸಹಯೋಗದಲ್ಲಿ ಜಿಲ್ಲೆಯಲ್ಲಿ ಎಲ್.ಇ.ಡಿ. ವಾಹನದ ಮೂಲಕ ಹಮ್ಮಿಕೊಂಡಿರುವ ಪ್ರಚಾರ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಅತಿಯಾದ ಪೆಟ್ರೋಲ್ ಇಂಧನಗಳ ಬಳಕೆಯಿಂದ ಪರಿಸರ ಮಾಲಿನ್ಯ ಉಂಟಾಗುತ್ತಿದೆ. ಅದರಲ್ಲೂ ಶುದ್ಧಗಾಳಿ ಗುಣಮಟ್ಟಕಡಿಮೆಯಾಗಿವಾಯುಮಾಲಿನ್ಯ ಹೆಚ್ಚುತ್ತಿದೆ. ಸಾಂಪ್ರದಾಯಕ ಇಂಧನಗಳ ಬದಲಿಗೆ ಎಲೆಕ್ಟ್ರಿಕಲ್ ವಾಹನ ಹಾಗೂ ಸಮೂಹ ಸಾರಿಗೆ ಬಳಕೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸಾರಿಗೆ ಇಲಾಖೆ ವತಿಯಿಂದ ಪರಿಸರ ರಕ್ಷಣೆಯ ಧ್ಯೇಯದೊಂದಿಗೆ, ರಸ್ತೆ ಸುರಕ್ಷತಾ ಸಪ್ತಾಹ ಆಚರಿಸಲಾಗುತ್ತಿದ್ದು, ಮಂಗಳವಾರ ನಗರದ ಜಿಲ್ಲಾಧಿಕಾರಿಗಳ



ಕಚೇರಿ ಅವರಣದಲ್ಲಿ ಜಿಲ್ಲಾಧಿಕಾರಿ ವೆಂಕಟೇಶ್.ಟಿ ಜನಜಾಗೃತಿ ಎಲ್.ಇ.ಡಿ ವಾಹನಕ್ಕೆ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು. ರಸ್ತೆ ಸುರಕ್ಷತೆಯು ಜೀವನದ ಸುರಕ್ಷತೆಯಾಗಿದೆ. ಹೆಲ್ಮೆಟ್ ಧರಿಸುವುದು, ಸೀಟ್ ಬೆಲ್ಟ್ ಬಳಸುವುದು, ಅಲ್ಲದೆ ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ಅಪಘಾತಗಳನ್ನು ತಡೆಗಟ್ಟುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.ಇದರಜೊತೆಗೆಅತಿಯಾದ ಇಂಧನಗಳ ಬಳಕೆಯಿಂದ ಪರಿಸರದ ಮೇಲೆ ಹಾನಿಯಾಗುತ್ತಿದ್ದು, ಸಾಮೂಹಿಕ ಸಂಚಾರ ವ್ಯವಸ್ಥೆ ಬಳಸುವುದಕ್ಕೆ ಆದ್ಯತೆ ನೀಡುವುದು ಮುಂತಾದ ಕಾರ್ಯಗಳಿಂದ ವಾಯುಮಾಲಿನ್ಯ ತಡೆಗಟ್ಟಬಹುದಾಗಿದೆ. ಸಾರ್ವಜನಿಕರು ಇಂತಹ ಕಾರ್ಯಗಳಲ್ಲಿ ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮದ ಯಶಸ್ವಿಗೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಆಶಯ ವ್ಯಕ್ತಪಡಿಸಿದರು.ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿದ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಘೆ ಅವರು, ಎಲ್.ಇ.ಡಿ ವಾಹನವು ಜಿಲ್ಲೆಯಾದ್ಯಂತ ಸಂಚರಿಸಿ, ಸಾರ್ವಜನಿಕರಲ್ಲಿ ಪರಿಸರ ರಕ್ಷಣೆ, ರಸ್ತೆ ಸುರಕ್ಷತಾ ಸೂಚನೆಗಳು, ಸಂಚಾರ ನಿಯಮಗಳ ಕುರಿತು ಜಾಗೃತಿ ಮೂಡಿಸಲಿದೆ. ಸಾರಿಗೆ ಇಲಾಖೆ ವತಿಯಿಂದ 6 ವಿವಿಧ ಬಗೆಯ ಕಿರುಚಿತ್ರಗಳನ್ನು ನಿರ್ಮಿಸಲಾಗಿದೆ. ಜಾತ್ರೆ, ಸಂತೆ, ಪಟ್ಟಣ, ನಗರ ಸೇರಿದಂತೆ ಜನದಟ್ಟಣೆ ಹೆಚ್ಚಿರುವ ಸ್ಥಳಗಳಲ್ಲಿ ಎಲ್.ಇ.ಡಿ ಪರದೆಯ ಮೇಲೆ ಈ ಕಿರುಚಿತ್ರಗಳನ್ನು ಪ್ರದರ್ಶಿಸಲಾಗುವುದು. ಸಾರ್ವಜನಿಕರು ಕಿರು ಚಿತ್ರಗಳನ್ನು ವೀಕ್ಷಿಸಿ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಜನಜಾಗೃತಿ ಎಲ್.ಇ.ಡಿ ವಾಹನಕ್ಕೆ ಚಾಲನೆ ನೀಡುವ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಘೆ, ಮೋಟಾರು ವಾಹನ ನಿರೀಕ್ಷಕರಾದ ಶಾನುಭಾಗ್, ಪ್ರಕಾಶ್, ಲೋಕೋಪಯೋಗಿ ಇಲಾಖೆಯ ರಾಜೇಶ್, ಸಾರಿಗೆ ಇಲಾಖೆಯ ಅಧೀಕ್ಷಕ ಸಿ.ಡಿ.ಹೇಮಂತ್ ಕುಮಾರ್ ಇದ್ದರು.

## ಫಾಸ್ಟ್ ನ್ಯೂಸ್

### ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಹಾಯಧನ ಅರ್ಜಿ

» ಚಿತ್ರದುರ್ಗ


ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ 2024-25ನೇ ಸಾಲಿಗೆ ವಿವಿಧ ಘಟಕಗಳಿಗೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ದಾಳಿಂಬೆ, ಅಂಗಾಂಶ ಬಾಳೆ, ಡ್ರ್ಯಾಗನ್ ಫ್ರೂಟ್ ಹಣ್ಣಿನ ಬೆಳೆಗಳ, ಹೈಬ್ರಿಡ್ ತರಕಾರಿ, ಸುಗಂಧರಾಜ ಹೂವುಗಳು, ಬಿಡಿ ಹೂವುಗಳು, ಪ್ರದೇಶ ವಿಸ್ತರಣೆ, ಸಮುದಾಯ ನೀರು ಸಂಗ್ರಹಣಾ ಘಟಕ, ವೈಯಕ್ತಿಕ ನೀರು ಸಂಗ್ರಹಣಾ ಘಟಕ, ಪ್ಲಾಸ್ಟಿಕ್ ಮಲ್ಚಿಂಗ್, ನೆರಳು ಪರದೆ, ಪ್ಯಾಕ್ ಹೌಸ್, ಹಾಗೂ ಈರುಳ್ಳಿ ಶೇಖರಣ ಘಟಕಗಳಿಗೆ ಸಹಾಯಧನ ಪಡೆಬಹುದು. ಆಸಕ್ತ ರೈತ ಫಲಾನಿಭವಿಗಳು ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಇಲಾಖೆ ಕಛೇರಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಫೆ.25 ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ಪರೀಕ್ಷೆ: ವಸ್ತ್ರ ಸಂಹಿತೆ ಪಾಲಿಸಲು ಸೂಚನೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಪೊಲೀಸ್ ಕಾನ್ಸ್ಟೇಬಲ್ ಹಾಗೂ ಸೇವಾನಿರತ ಮತ್ತು ಬ್ಯಾಕ್‌ಲಾಗ್ ಹುದ್ದೆಗಳಿಗೆ ಇದೇ ಫೆ.25ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30ರವರೆಗೆ ರಾಜ್ಯದಾದ್ಯಂತ ಪರೀಕ್ಷೆ ನಡೆಯಲಿದೆ. ಸದರಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಈ ಕೆಳಗಿನ ವಸ್ತ್ರ ಸಂಹಿತೆಯನ್ನು ಪಾಲಿಸುವಂತೆ ತಿಳಿಸಿದೆ.ಪುರುಷ ಮತ್ತು ಪುರುಷ ತೃತೀಯ ಲಿಂಗಿ ಅಭ್ಯರ್ಥಿಗಳು : ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸುವುದು ಕಡ್ಡಾಯ, ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ್ ಧರಿಸುವುದು, ಜಿಪ್ ಹಾಗೂ ಜೀನ್ಸ್ ಪ್ಯಾಂಟ್, ದೊಡ್ಡ ಬಟನ್ ಶರ್ಟ್, ಹೆಚ್ಚು ಜೇಬುಗಳಿರುವ ಪ್ಯಾಂಟ್ ಧರಿಸುವಂತಿಲ್ಲ ಹಾಗೂ ಪರೀಕ್ಷಾ ಕೇಂದ್ರದೊಳಗೆ ಷೂಗಳನ್ನು ನಿಷೇಧಿಸಿದ್ದು, ಅಭ್ಯರ್ಥಿಗಳು ತೆಳುವಾದ ಅಡಿಭಾಗವಿರುವ ಪಾದರಕ್ಷೆಗಳನ್ನು ಧರಿಸುವುದು ಮತ್ತು ಕುತ್ತಿಗೆ ಸುತ್ತಲೂ ಯಾವುದೇ ಲೋಹದ ಆಭರಣ ಅಥವಾ ಉಂಗುರ ಮತ್ತು ಕಡಗಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ. ಮಹಿಳಾ ಮತ್ತು ತೃತೀಯ ಲಿಂಗಿ ಮಹಿಳಾ ಅಭ್ಯರ್ಥಿಗಳಿಗೆ : ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು, ಅಥವಾ ಬಟನ್ ಹೊಂದಿರುವ ಬಟ್ಟೆ, ಹಾಗೂ ಪರೀಕ್ಷಾ ದಿನದಂದು ಪೂರ್ಣ ತೋಳಿನ ಬಟ್ಟೆ, ಜೀನ್ಸ್ ಪ್ಯಾಂಟ್, ಎತ್ತರವಾದ ಹಾಗೂ ದಪ್ಪವಾದ ಅಡಿ ಭಾಗ ಹೊಂದಿರುವ ಹಿಮ್ಮಡಿ ಶೂ, ಚಪ್ಪಲಿ ಧರಿಸುವಂತಿಲ್ಲ. ಈ ಅಭ್ಯರ್ಥಿಗಳು ಮಂಗಳ ಸೂತ್ರ ಕಾಲುಂಗುರ ಹೊರತುಪಡಿಸಿ ಯಾವುದೇ ತರಹದ ಲೋಹದ ಆಭರಣಗಳನ್ನು ಧರಿಸುವಂತಿಲ್ಲ, ಎಂದು ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

### ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ಗೆ ಅಡಿಕೆ ಬಲಿ




» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ದೊಡ್ಡಬೀರನಹಳ್ಳಿ ಗ್ರಾಮದಲ್ಲಿ ಸೋಮವಾರ ಬೆಳಗ್ಗೆ ವಿದ್ಯುತ್ ಶಾರ್ಟ್‌ಸರ್ಕ್ಯೂಟ್‌ನಿಂದ ಗ್ರಾಮದ ರಿ.ಸರ್ವೆ ನಂ. 90ರಲ್ಲಿ ಹಾಕಿದ್ದ 60ರಿಂದ70 ಅಡಿಕೆ ಗಿಡ, 20ಕ್ಕೂ ಹೆಚ್ಚು ತೆಂಗಿನ ಮರಗಳು ಸುಟ್ಟು ಸಾವಿರಾರು ನಷ್ಟ ಸಂಭವಿಸಿದೆ ಎಂದು ಜಮೀನು ಮಾಲೀಕ ಮುದ್ದೆಗೌಡ ತಿಳಿಸಿದ್ದಾರೆ. ಇದೇ ಸರ್ವೆ ನಂ ನ ಖಾತೆದಾರರಾದ ಡಿ.ಯಶೋಧರವರಿಗೆ ಸೇರಿದ ಜಮೀನಿನಲ್ಲಿದ್ದ 20 ಅಡಿಕೆ, 10 ತೆಂಗಿನ ಮರಗಳು ಸಹ ಅಗ್ನಿಅವಘಡಕ್ಕೆ ಆಹುತಿಯಾಗಿದ್ದು, ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ಧಾರೆ.

### ಬಿ.ಟಿ.ಶೈಲೇಂದ್ರ ಸಾವು

» ಚಳ್ಳಕೆರೆ



ನಗರದ ಹೆಗ್ಗೆರೆತಾಯಮ್ಮ ಪ್ರೌಢಶಾಲಾ ಮುಂಭಾಗದಲ್ಲಿ ಭಾನುವಾರ ರಾತ್ರಿ ನಡೆದ ಲಾರಿ ಹಾಗೂ ಬೈಕ್ ನಡುವೆ ಅಪಘಾತದಲ್ಲಿ ಬೈಕ್ ಸವಾರ ಚಳ್ಳಕೆರೆಯ ನಂದಿನಿ ಉತ್ಪನ್ನಗಳ ಮಾರಾಟಗಾರ ಬಿ.ಟಿ.ಶೈಲೇಂದ್ರ(52) ಮೃತಪಟ್ಟಿರುತ್ತಾರೆ. ನಂದಿನಿ ಹಾಲಿನ ಏಜೆಂಟರಾಗಿ ಕಳೆದ ಸುಮಾರು 20 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದ ಬಿ.ಟಿ.ಶೈಲೇಂದ್ರ ಭಾನುವಾರ ಚಿತ್ರದುರ್ಗ ರಸ್ತೆಯ ಕೆಲವು ಅಂಗಡಿ, ಹೋಟೆಲ್‌ಗಳಲ್ಲಿ ಹಾಲಿನ ಕಲೆಕ್ಷನ್ ನಡೆಸಿ ವಾಪಾಸ್ ಬರುವಾಗ ಆಂಧ್ರಪ್ರದೇಶಕ್ಕೆ ಸೇರಿದ ಲಾರಿ ರಸ್ತೆಬದಿ ಯಾವುದೇ ಇಂಡಿಕೇಟರ್ ಇಲ್ಲದೆ ನಿಂತಿದ್ದು ಬೈಕ್‌ಬಂದ ಶೈಲೇಂದ್ರನಿಗೆ ಲಾರಿಕಾಣದೆ ಲಾರಿ ಹಿಂಬದಿಗೆ ಡಿಕ್ಕಿ ಹೊಡೆದಿದ್ದಾನೆ. ಕೂಡಲೇ ಇಲ್ಲಿನ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದಾಗ ವೈದ್ಯರು ಮೃತಪಟ್ಟಿರುವುದಾಗಿತಿಳಿಸಿದ್ಧಾರೆ.

---

### ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಕುಡಿವ ನೀರಿನ ಸಮಸ್ಯೆಯಾಗದಂತೆ ಕ್ರಮ ವಹಿಸಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಬೇಸಿಗೆಯ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಸಾಧ್ಯತೆಗಳಿದ್ದು,ಕುಡಿಯುವ ನೀರಿನ ಸಮಸ್ಯೆ ತಲೆದೋರಬಹುದಾದ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಈಗಲೇ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರಿನ ಪರಿಸ್ಥಿತಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿರುವ ಪ್ರದೇಶಗಳಲ್ಲಿ ಕೈಗೊಳ್ಳಬೇಕಾಗಿರುವ ಪರಿಹಾರ ಕ್ರಮಗಳ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆರು ತಾಲ್ಲೂಕುಗಳು ಈಗಾಗಲೇ ಬರಪೀಡಿತ ತಾಲ್ಲೂಕುಗಳು ಎಂದು ಘೋಷಣೆಯಾಗಿದ್ದು, ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಪಟ್ಟಂತೆ ಈಗಾಗಲೇ ಸಾಕಷ್ಟು ದೂರುಗಳು ಕೇಳಿ ಬರುತ್ತಿವೆ. ಆಯಾ ಕ್ಷೇತ್ರ ಶಾಸಕರುಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ತಾಲ್ಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯನ್ನು ಏರ್ಪಡಿಸಿ, ಕುಡಿಯುವ ನೀರಿನ ಸಮಸ್ಯೆಗಳ ಪರಿಹಾರಕ್ಕಾಗಿ ಎಲ್ಲೆಲ್ಲಿ ನೀರಿನ ಮೂಲಗಳಿವೆ, ಪೈಪ್‌ಲೈನ್ ವಿಸ್ತರಣೆ, ಬೋರ್‌ವೆಲ್‌ಗಳ ದುರಸ್ತಿ, ಟ್ಯಾಂಕರ್ ಮೂಲಕ ಪೂರೈಕೆ ಸೇರಿದಂತೆ ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ಕೂಲಕಂಕಷವಾಗಿ ಚರ್ಚಿಸಿ, ಪರಿಹಾರ ಕಾರ್ಯ ಕುರಿತಂತೆ ಜಿಲ್ಲಾ ಮಟ್ಟದಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಆಗಬೇಕಿರುವ ಕಾರ್ಯಗಳ ಬಗ್ಗೆ ನಡಾವಳಿಯಲ್ಲಿ ಗೊತ್ತುಪಡಿಸಿ, ಪ್ರಸ್ತಾವನೆ ಸಲ್ಲಿಸುವ ಕಾರ್ಯ ತ್ವರಿತವಾಗಿ ಆಗಬೇಕು ಎಂದರು.ನೀರಿನ ಸಮಸ್ಯೆಯಾಗದಂತೆ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿಟ್ಟು ಕೊಂಡಿರಬೇಕು. ಮಾಲೀಕರ ಮನವೊಲಿಸಿ ಬಾಡಿಗೆ ನಿಗದಿಪಡಿಸಬೇಕು. ಅಂತಹ ಬೋರ್‌ವೆಲ್‌ಗೆ ಅಗತ್ಯವಿದ್ದರೆ ಪೈಪ್‌ಲೈನ್ ಮಾಡಿಕೊಳ್ಳಬಹುದು. ಒಂದು ವೇಳೆ ನೀರು ಲಭ್ಯವಾಗದೇ ಇರುವ ಪಕ್ಷದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವುದುಕೊನೆಯಆದ್ಯತೆಯಾಗಬೇಕು ಎಂದು ಹೇಳಿದರು.ಚಳ್ಳಕೆರೆ ತಾ.ಪಂ ಇಒ ಮಾತನಾಡಿ, ತಾಲ್ಲೂಕಿನಲ್ಲಿ ಅಂತರ್ಜಲ ಮಟ್ಟ ಅಲ್ಪಮಟ್ಟಿಗೆ ಕುಸಿದಿದೆ. ಈಗಾಗಲೆ 53 ಹಳ್ಳಿಗಳನ್ನು ಕುಡಿಯುವ ನೀರಿನ ಸಮಸ್ಯಾತ್ಮಕ ಹಳ್ಳಿಗಳು ಎಂದು ಗುರುತಿಸಲಾಗಿದೆ. 18 ಹಳ್ಳಿಗಳಿಗೆ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಲಾಗಿದೆ. ಇದರಲ್ಲಿಯೂ ನೀರು ಕಡಿಮೆಯಾಗುವ ಸಂಭವ ಇದೆ. ಇನ್ನೂ 14 ಹಳ್ಳಿಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಪೂರೈಕೆ ಮಾಡುವ ಪರಿಸ್ಥಿತಿ ಬರಬಹುದು ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು ಪರಿಸ್ಥಿತಿ ಗಂಭೀರವಾದರೆ ಟ್ಯಾಂಕರ್ ಮುಲಕ ನೀರು ಸರಬರಾಜು ಮಾಡಿ, ಒಟ್ಟಾರೆಯಾಗಿ ಕುಡಿಯುವ ನೀರು ಪೂರೈಕೆ ಮಾಡಲೇಬೇಕು. ಪ್ರತಿ ತಾಲ್ಲೂಕಿಗೆ ತುರ್ತು ಕಾರ್ಯಗಳಿಗಾಗಿ 40 ಲಕ್ಷ ರೂ. ಅನುದಾನ ಒದಗಿಸಲಾಗಿದೆ ಎಂದರು. ಅಲ್ಲದೆ ಟ್ಯಾಂಕರ್ ಮೂಲಕ ನೀರು ಸರಬರಾಜು ಪೂರೈಕೆ ಮಾಡಲು ಈಗಾಗಲೇ ಟೆಂಡರ್ ಕರೆಯಲಾಗಿದ್ದು, ತುರ್ತಾಗಿ ಅಗತ್ಯವಿರುವೆಡೆ ತಹಸಿಲ್ದಾರರ ಸೂಚನೆ ಮೇರೆಗೆ ಟ್ಯಾಂಕರ್ ಮೂಲಕ ಸರಬರಾಜು ಮಾಡುವವರಿಗೆ ಟೆಂಡರ್ ನಲ್ಲಿ ಅಂತಿಮವಾಗಿ ನಿಗದಿಯಾಗುವ ದರಕ್ಕೆ ಅನುಗುಣವಾಗಿ ಮೊತ್ತ ಪಾವತಿಸಲಾಗುವುದು ಎಂದರು.ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಮಹೇಂದ್ರಕುಮಾರ್,ಗ್ರಾಮೀಣ ಕುಡಿಯುವ ನೀರು ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಪಾತಪ್ಪ, ನಗರಸಭೆ ಪೌರಾಯುಕ್ತೆ ರೇಣುಕಾ ಸೇರಿದಂತೆ ತಹಶೀಲ್ದಾರ್‌ಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



#### ಗುಣಮಟ್ಟ ಪರೀಕ್ಷೆ

ಜಿಲ್ಲೆಯ ನಗರ, ಪಟ್ಟಣ ಮತ್ತು ಗ್ರಾಮ ಪಂಚಾಯತಿಗಳಲ್ಲಿ ಪೂರೈಸಲಾಗುವ ನೀರು, ನೀರಿನ ಸಂಗ್ರಹಾಗಾರಗಳಲ್ಲಿನ ನೀರಿನ ಗುಣಮಟ್ಟವನ್ನು ನಿಯಮಿತವಾಗಿ ಪರೀಕ್ಷೆಗೆ ಒಳಪಡಿಸಬೇಕು. ನೀರು ಪೂರೈಕೆಯ ಪೈಪ್‌ಲೈನ್ ಮಾರ್ಗಗಳನ್ನು ಆಗಿಂದಾಗ್ಗೆ ಪರಿಶೀಲನೆ ನಡೆಸುತ್ತಿರಬೇಕು, ಕಲುಷಿತ ನೀರು ಕಾರಣದಿಂದ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ತೀವ್ರ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

#### 289 ಸಮಸ್ಯಾತ್ಮಕ ಗ್ರಾಮಗಳು

ಮುಂಬರುವ ತಿಂಗಳುಗಳಲ್ಲಿ ಜಿಲ್ಲೆಯಲ್ಲಿ 289 ಗ್ರಾಮಗಳಲ್ಲಿ ಕುಡಿಯುವ ನೀರಿನ ಕೊರತೆ ಎದುರಾಗುವ ಸಾಧ್ಯತೆ ಇದೆ. ಚಳ್ಳಕೆರೆ ತಾಲ್ಲೂಕಿನಲ್ಲಿ 53, ಚಿತ್ರದುರ್ಗ-44, ಹಿರಿಯೂರು-57, ಹೊಳಲ್ಕೆರೆ-53, ಹೊಸದುರ್ಗ-36 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 67 ಸಮಸ್ಯಾತ್ಮಕ ಗ್ರಾಮಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 289 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಂಭವವಿದೆ. ಈ ಸಂಖ್ಯೆಯು ದಿನದಿಂದ ದಿನಕ್ಕೆ ಬದಲಾಗುವ ಸಾಧ್ಯತೆಗಳಿವೆ. ಹಾಗಾಗಿ ಚಳ್ಳಕೆರೆ ತಾಲ್ಲೂಕಿನಲ್ಲಿ 24, ಚಿತ್ರದುರ್ಗ-1, ಹಿರಿಯೂರು-54, ಹೊಳಲ್ಕೆರೆ-13 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 78 ಸೇರಿದಂತೆ ಒಟ್ಟು 170 ಬೋರ್‌ವೆಲ್‌ಗಳನ್ನು ಒಪ್ಪಂದಕ್ಕಾಗಿ ಇಳುವರಿ ನೀಡುವ ಬೋರ್‌ವೆಲ್‌ಗಳನ್ನು ಗುರುತಿಸಲಾಗಿದೆ. ಪೈಪ್‌ಲೈನ್ ಮತ್ತಿತರ ತುರ್ತು ಕಾರ್ಯಗಳಿಗಾಗಿ ಪ್ರತಿ ತಾಲ್ಲೂಕಿಗೆ ತಲಾ 25 ಲಕ್ಷ ರೂ. ಅನುದಾನ ಒದಗಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಹೇಳಿದರು.

---

# ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳಲ್ಲಿ ಸಂವಿಧಾನ ಜಾಗೃತಿ ಸ್ಥಬ್ದಚಿತ್ರದ ಮೆರವಣಿಗೆ

» ಚಿತ್ರದುರ್ಗ

ಸಂವಿಧಾನ ಜಾಗೃತಿ ಸ್ಥಬ್ದಚಿತ್ರ ಮಂಗಳವಾರ ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳಲ್ಲಿ ವಿವಿಧ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂಚರಿಸಿ ಜನರಲ್ಲಿ ಜಾಗೃತಿ ಮೂಡಿಸಿದೆ.

ಮಂಗಳವಾರ ಬೆಳಿಗ್ಗೆ ಹೊಳಲ್ಕೆರೆ ತಾಲ್ಲೂಕಿನ ಅಂದನೂರು, ಮುತ್ತದೂರು, ಬಿ.ದುರ್ಗ ಹಾಗೂ ಆಡನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಚರಿಸಿತು. ಈ ವೇಳೆಯಲ್ಲಿ ಪೂರ್ಣ ಕುಂಬ ಹೊತ್ತ ಮಹಿಳೆಯರು ಸ್ಥಬ್ದಚಿತ್ರ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಬಿ.ದುರ್ಗ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಶೇಷ ಬೈಕ್ ರ್‍ಯಾಲಿ ಆಯೋಜಿಸಲಾಗಿತ್ತು. ಪ್ರತಿ ಗ್ರಾಮಗಳಲ್ಲಿಯೂ ಆಕರ್ಷಕ ಸಂವಿಧಾನ ಜಾಗೃತಿ ಸ್ಥಬ್ದಚಿತ್ರ ಜನರ ಮನಸ್ಸನ್ನು ಗೆಲ್ಲುವುದರೊಂದಿಗೆ ಸಂವಿಧಾನ ಮಹತ್ವ ಸಾರುತ್ತಿದೆ. ಸ್ಥಬ್ದಚಿತ್ರ ಹೊದ ಕಡೆಯಲ್ಲಾ ಜನಸ್ಪಂದನೆ ಅಭೂತ ಪೂರ್ವವಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.



ಮಧ್ಯಾಹ್ನ ಹೊಸದುರ್ಗ ತಾಲ್ಲೂಕಿನ ಹೆಬ್ಬಳ್ಳಿ, ದೇವಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಚರಿಸಿ ಸಂಜೆ ಸಾಂಸ್ಕೃತಿಕ ಕಾರ್ಯಕ್ರಗಳೊಂದಿಗೆ ಮಧುರೆ ಗ್ರಾಮ ಕೊನೆಗೊಂಡಿತು. ಪ್ರತಿ ಗ್ರಾಮಗಳಲ್ಲಿಯೂ ಅಧ್ಯಕ್ಷರು ಉಪಾಧ್ಯಕ್ಷರು ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು,ಶಾಲೆಯಮುಖ್ಯೋಪಾಧ್ಯಾಯರು ಸಹ ಶಿಕ್ಷಕರು, ಶಾಲಾ ಮಕ್ಕಳು ಅಂಗನವಾಡಿ ಆಶಾ ಕಾರ್ಯಕರ್ತೆಯರು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಮತ್ತು ಸಿಬ್ಬಂದಿ ವರ್ಗ ಅಕ್ಷರ ದಾಸೋಹ ನೋಡಲ್ ಅಧಿಕಾರಿಗಳು ಗ್ರಾಮಸ್ಥರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

---

### ಮನೆ ಮನೆ ಬಾಗಿಲಿಗೆ ಇ-ಸ್ವತ್ತು ವಿತರಣಾ ಕಾರ್ಯಕ್ರಮಕ್ಕೆ ಚಾಲನೆ



» ಹೊಸದುರ್ಗ

ಹೊಸದುರ್ಗ ಪಟ್ಟಣದಲ್ಲಿ ಸಾರ್ವಜನಿಕರಿಗೆ ಹಾಗೂ ಆಸ್ತಿ ಮಾಲೀಕರಿಗೆ ಮನೆಯ ಬಾಗಿಲಿಗೆ ಇ-ಸ್ವತ್ತುಗಳನ್ನು ಮುದ್ರಿಸಿ ವಾರ್ಡ್ ವಾರು ಪ್ರತಿ ಮನೆ ಮಾಲೀಕರಿಗೆ ತಲುಪಿಸುವ ಅಭಿಯಾನ ಕಾರ್ಯಕ್ರಮಕ್ಕೆ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಮಂಗಳವಾರ ಚಾಲನೆ ನೀಡಿದರುನಂತರ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪಟ್ಟಣದಲ್ಲಿ 23 ವಾರ್ಡ್‌ಗಳಿದ್ದು ಸಾರ್ವಜನಿಕರಿಗೆ ಹಾಗೂ ಆಸ್ತಿ ಮಾಲೀಕರಿಗೆ ಮನೆಯ ಬಾಗಿಲಿಗೆ ಸರ್ಕಾರ ಇರಲಿ ನಿಮ್ಮ ಸಹಕಾರ ಎಂಬ ಘೋಷವಾಕ್ಯದಡಿ ಇ-ಸ್ವತ್ತುಗಳನ್ನು ಮುದ್ರಿಸಿ ವಾರ್ಡ್ ವಾರು ಪ್ರತಿ ಮನೆ ಮಾಲೀಕರಿಗೆ ತಲುಪಿಸುವ ಅಭಿಯಾನ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳು, ಜಿಲ್ಲಾ ಯೋಜನಾ ನಿರ್ದೇಶಕರು ಹಾಗೂ ಶಾಸಕರಾದ ಬಿ.ಜಿ.ಗೋವಿಂದಪ್ಪನವರು ಹಾಗೂ ಅಧಿಕಾರಿಗಳ ಸಭೆ ಕರೆದು ನೀಡಿರುವ ಸೂಚನೆಯಂತೆ ಮಂಗಳವಾರ ಪಟ್ಟಣದ ವಾರ್ಡ್ ನಂಬರ್ 18ರ ಶ್ರೀ ದುರ್ಗಮ್ಮನ ದೇವಸ್ಥಾನದ ಮುಂಭಾಗ ಕ್ಯಾಂಪ್‌ನಲ್ಲಿ 10 ಜನಕ್ಕೆ ಸ್ಥಳದಲ್ಲೇ ಇ-ಸ್ವತ್ತನ್ನು ನೀಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ ಎಂದರು.ಈ ಸಂದರ್ಭದಲ್ಲಿ ಪುರಸಭಾ ಸದಸ್ಯರುಗಳಾದ ದೊಡ್ಡಯ್ಯ, ಶಂಕರಪ್ಪ, ರಾಮಚಂದ್ರಪ್ಪ, ಕಂದಾಯಾಧಿಕಾರಿ ಯೋಗೇಶ್ .ಬಿ.ಎಲ್, ಕರ ವಸೂಲಿಗಾರ ವಿನಯ್, ಲಿಂಗರಾಜು, ಮಂಜುನಾಥ, ಆರೋಗ್ಯ ನಿರೀಕ್ಷಕ ಬಸರವರಾಜು, ಸಿಬ್ಬಂದಿಗಳಾದ ಸಾವಿತ್ರಿ, ತಿಪ್ಪೇಶ್ ಮತ್ತಿತರರು ಹಾಜರಿದ್ದರು.

---

### ರೆಸ್ಟೋರೆಂಟ್‌ಗಳ ಮೇಲೆ ನಗರಸಭೆ ಧಾಳಿ: ನಿಷೇಧಿತ ಪ್ಲಾಸ್ಟಿಕ್ ವಶ



ಚಿತ್ರದುರ್ಗ: ನಗರದಲ್ಲಿ ಕೆಲವು ಬಾರ್ ಅಂಡ್ ರೆಸ್ಟೋರೆಂಟ್, ಕಿರಾಣಿ ಅಂಗಡಿಗಳ ಮೇಲೆ ನಗರಸಭೆಯವರು ಧಾಳಿ ನಡೆಸಿ ನೂರು ಕೆ.ಜಿ. ಪ್ಲಾಸ್ಟಿಕ್ ವಶಪಡಿಸಿಕೊಂಡು ಹದಿನಾಲ್ಕು ಸಾವಿರದ ಆರು ನೂರು ರೂ. ಗಳ ದಂಡ ವಿಧಿಸಿದ್ದಾರೆ. ನಗರಸಭೆ ಪೌರಾಯುಕ್ತರಾದ ಎಂ.ರೇಣುಕಾ, ವ್ಯವಸ್ಥಾಪಕಿ ಬಿ.ಮಂಜುಳ, ಪರಿಸರ ಇಂಜಿನಿಯರ್ ಜಾಫರ್, ರೇಣುಕ, ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ಸರಳ, ಭಾರತಿ, ನಿರ್ಮಲ, ನಾಗರಾಜ್, ಬಸವರಾಜ್ ಇವರುಗಳು ಧಾಳಿ ನಡೆಸಿದರು.

---

## ಪ್ರಮುಖ ಸುದ್ದಿ

### ಸಾಂಕ್ರಾಮಿಕ ರೋಗಗಳ ತಡೆಗಟ್ಟುವ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಡಾ.ಜಿಆರ್ ತಿಮ್ಮೇಗೌಡ

# ಬಾಲ್ಯ ವಿವಾಹಕ್ಕೆ ಆಸ್ಪದ ಕೊಡಬೇಡಿ ಶಿಕ್ಷೆಗೆ ಗುರಿಯಾಗಬೇಡಿ

» ಚಿತ್ರದುರ್ಗ

ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧವಾಗಿದೆ. ಯಾರು ಕೂಡ ಬಾಲ್ಯ ವಿವಾಹಕ್ಕೆ ಆಸ್ಪದ ಕೊಡಬಾರದು. ಬಾಲ್ಯ ವಿವಾಹ ಕಾರಣರಾದವರೆಲ್ಲರೂ ಶಿಕ್ಷೆ ಗುರಿಯಾಗುತ್ತಾರೆ ಎಂದು ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ಡಾ. ಜಿ.ಆರ್.ತಿಮ್ಮೇಗೌಡ ಹೇಳಿದರು.

ಚಿತ್ರದುರ್ಗ ತಾಲೂಕಿನ ಸಿರಿಗೆರೆ ಅಕ್ಕಮಹಾದೇವಿ ಬಾಲಕಿಯರ ಪ್ರಸಾದ ನಿಲಯದಲ್ಲಿಆರೋಗ್ಯಇಲಾಖೆವತಿಯಿಂದ ವಸತಿ ನಿಲಯ ಪಾಲಕರು , ನಿವಾಸಿ ಶಿಕ್ಷಕರು ಹಾಗೂ ವಿದ್ಯಾರ್ಥಿನಿಯರಿಗೆ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ, ಹಾಗೂ ವಸತಿ ನಿಲಯಗಳಲ್ಲಿ ಹರಡುವ ಸಾಂಕ್ರಾಮಿಕ ರೋಗಗಳ ತಡೆಗಟ್ಟುವ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಚಿಕ್ಕ ವಯಸ್ಸಿಗೆ ಹೆಣ್ಣು ಮಕ್ಕಳ ಮದುವೆ ಮಾಡುವುದರಿಂದ ಆರೋಗ್ಯದ ಸಮಸ್ಯೆಯ ಜೊತೆಗೆ ಕಾನೂನು ಸಮಸ್ಯೆಗಳಿಗು ಗುರಿಯಾಗಬೇಕಾಗುತ್ತದೆ. ಮುಖ್ಯವಾಗಿ ಪಿ.ಯು.ವಿದ್ಯಾರ್ಥಿನಿಯರು ಇದರ ಬಗ್ಗೆ ತಿಳುವಳಿಕೆ ಹೊಂದಿರಬೇಕು ಎಂದರು.

ಶೇಕಡ 50ರಷ್ಟು ಹೆಣ್ಣು ಮಕ್ಕಳಲ್ಲಿ ರಕ್ತ ಹೀನತೆ ತೊಂದರೆ ಕಂಡುಬರುತ್ತದೆ. ವಸತಿ ನಿಲಯಗಳಲ್ಲಿ ಸಣ್ಣಪುಟ್ಟ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಸ್ವಚ್ಛತೆಗೆ ಹೆಚ್ಚು ಆದ್ಯತೆ ನೀಡಬೇಕು. ಆರೋಗ್ಯ ಸಮಸ್ಯೆಗಳು ಕಂಡು ಬಂದಲ್ಲಿ ಕೂಡಲೇ ವೈದ್ಯರಲ್ಲಿ ಪರೀಕ್ಷೆಗೆ ಒಳಪಟ್ಟು ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು. ಪರೀಕ್ಷೆಗಳು ಸಮೀಪಿಸುತ್ತಿರುವುದರಿಂದ ವಿದ್ಯಾರ್ಥಿಗಳು ಯಾವುದೇ ಒತ್ತಡಕ್ಕೆ ಒಳಗಾಗಬಾರದು. ಸಮಯ ಸದುಪಯೋಗ ಪಡಿಸಿಕೊಂಡು ಚೆನ್ನಾಗಿ ಅಭ್ಯಾಸ ಮಾಡಿ ಯಾವುದೇ ಉದ್ವೇಗಕ್ಕೆ ಒಳಗಾಗದೆ ಧೈರ್ಯದಿಂದ ಪರೀಕ್ಷೆ ಹೆದರಿಸಬೇಕೆಂದರು. ಹಿಂದೆ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಹಲವು ವಿದ್ಯಾರ್ಥಿಗಳು ಅದೆಷ್ಟೋ ಜನ ಹೆಚ್ಚಿನ ಶ್ರಮ ಪಟ್ಟು ಅಭ್ಯಾಸ ಮಾಡಿ ಮುಂದೆ ಉನ್ನತ ಅಧಿಕಾರಿಗಳಾಗಿರುವ ಉದಾಹರಣೆಗಳಿವೆ. ಆದ್ದರಿಂದ ಜೀವನ ಸಿಗುವುದು ಒಂದೇ ಬಾರಿ, ಕಡಿಮೆ ಅಂಕ ಪಡೆದೆನೆಂದು ಚಿಂತಿಸದೇ, ಆತ್ಮಹತ್ಯೆಗೆ ಶರಣಾಗದೆ, ಮುಂದಿನ ಭವಿಷ್ಯಕ್ಕೆ ಭದ್ರಬುನಾದಿ ಹಾಕಿಕೊಳ್ಳಬೇಕೆಂದು ವಿದ್ಯಾರ್ಥಿನಿಯರಿಗೆ ಡಾ. ಜಿ.ಆರ್.ತಿಮ್ಮೇಗೌಡ ಕಿವಿಮಾತು ಹೇಳಿದರು.


ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ ಹದಿಹರೆಯದ ಹೆಣ್ಣು ಮಕ್ಕಳು ಮುಟ್ಟಿನ ಸಮಯದಲ್ಲಿ ವೈಯಕ್ತಿಕ ಸ್ವಚ್ಛತೆ, ಕಾಪಾಡಿಕೊಳ್ಳಬೇಕು. ಪರಿಸರ ಸ್ನೇಹಿ ಮೈತ್ರಿ ಕಪ್ ಔಷಧಿ ಮಳಿಗೆಗಳಲ್ಲಿ ಲಭ್ಯವಿದ್ದು ಇದರ ಬಳಕೆ ಮಾಡಬೇಕೆಂದರು. ಮೈತ್ರಿ ಕಪ್ ನ್ನು ಸಕಾಲಕ್ಕೆ ಸ್ವಚ್ಛಗೊಳಿಸುತ್ತಾ ಕನಿಷ್ಠ 8 ವರ್ಷದವರೆಗೆ ಬಳಸಬಹುದು ಹಾಗೂ ಗುಡ್ ಟಚ್ ಮತ್ತು ಬ್ಯಾಡ್ ಟಚ್ ಇವುಗಳ ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾಹಿತಿ ನೀಡುತ್ತಾ ಕಳೆದ ವರ್ಷ 2023ರ ಜನವರಿ ರಿಂದ ನವೆಂಬರ್ 2023ರವರೆಗೆ 18 ವರ್ಷದೊಳಗೆ 1412 ಹೆಣ್ಣು ಮಕ್ಕಳು ಗರ್ಭಿಣಿಯಾಗಿರುವುದು ಆರೋಗ್ಯ ಇಲಾಖೆಯಲ್ಲಿ ದಾಖಲಾಗಿದೆ. ಸಾರ್ವಜನಿಕರಲ್ಲಿ ಮತ್ತು ಹದಿಹರೆಯದ ಹೆಣ್ಣು ಮಕ್ಕಳಲ್ಲಿ ಹಾಗೂ ಪೋಷಕರಿಗೆ ಆರೋಗ್ಯ ಶಿಕ್ಷಣ ನೀಡುವುದರ ಮುಖಾಂತರ ಮುಂಬರುವ ದಿನಗಳಲ್ಲಿ ಬಾಲ್ಯವಿವಾಹಕ್ಕೆಕಡಿವಾಣ ಹಾಕಬೇಕಾಗಿದೆ. ಇಳಿ ವಯಸ್ಸಿನ ಹೆಣ್ಣು ಮಕ್ಕಳಿಗೆ ಮದುವೆ ಮಾಡಿದರೆ ವಿಕಲಾಂಗ ಮಕ್ಕಳ ಜನನ, ದೈಹಿಕ ಬೆಳವಣಿಗೆ ಕುಂಠಿತ, ಗರ್ಭಪಾತ, ಗರ್ಭಶೀಲಕ್ಕೆ ಪೆಟ್ಟು ಸೇರಿದಂತೆ ಮಾನಸಿಕ ದೌರ್ಬಲ್ಯತೆಗೆ ಒಳಗಾಗುವುದು, ಮಾನಸಿಕ ಸ್ಥೈರ್ಯ ಕಳೆದುಕೊಂಡು ಭಯಭೀತ ವಾತಾವರಣ ಸೃಷ್ಟಿಯಾಗಿ, ಶಿಶು ಮರಣ ಮತ್ತು ತಾಯಿ ಮರಣ ಆಗುವ ಸಾಧ್ಯತೆ ಇದೆ ಎಂದರು.



# ಫೆಬ್ರವರಿ-14
# VALENTINES DAY
# ಪ್ರೇಮಿಗಳ ದಿನ

## ಹಾಗೆಯೇ ಅದು ಪೋಷಕರ ತಳಮಳದ ದಿನವೂ ಹೌದು



**ತಂದೆ ತಾಯಿಗಳ ಪಶ್ಚಾತ್ತಾಪದ ದಿನವೂ ಹೌದು.....**

ಆದರೆ ಇಲ್ಲಿ ಪ್ರೇಮಿಗಳ ಮನಃ ಪರಿವರ್ತನೆಯ ಕ್ಷಣವೂ, ಪೋಷಕರ ಕ್ಷಮಾ ದಿನವೂ ಒಟ್ಟಿಗೆ ನಡೆಯುವ ಸಾಧ್ಯತೆಯ ಒಂದು ಅಂತರಾಳದ ಪತ್ರ.........

ಪ್ರೀತಿಯ ಆಳ, ತಂದೆ ತಾಯಿಗಳ ಸೆಳೆತದ ಆಳ,

ಮಕ್ಕಳ ಮೇಲಿನ ಮೋಹದ ಆಳ, ಬದುಕಿನ ಕ್ಷಣಿಕತೆಯ ಅನುಭವ, ಮನಸ್ಸುಗಳ ತೊಳಲಾಟ ಎಲ್ಲವೂ ಇಲ್ಲಿ ಪ್ರಸ್ತುತವಾಗಿ.......

ಪ್ರೇಮಿಗಳು ಮನೆ ತೊರೆದು ಕಾಲಿಡುವ ಮುನ್ನ ಮತ್ತು ಪೋಷಕರು ಪ್ರೇಮಿಗಳಿಗೆ ಅಡ್ಡಗಾಲಾಗುವ ಮುನ್ನ ಒಂದು ಆತ್ಮಾವಲೋಕನಕ್ಕಾಗಿ...........

ಅಪ್ಪಾ,,,,,,,,,,,,,,

ಯಾಕಪ್ಪಾ, 24 ವರ್ಷಗಳು ಕಣ್ಣಲ್ಲಿ ಕಣ್ಣಿಟ್ಟು ನಿನಗಿಂತ ನನ್ನನ್ನೇ ಹುಚ್ಚನಂತೆ ಪ್ರೀತಿಸಿ ನಿನ್ನ ಬದುಕಿನ 24 ವರ್ಷಗಳು, ಅಮ್ಮನ ಬದುಕಿನ 25 ವರ್ಷಗಳು ನನ್ನ ಬೇಕು ಬೇಡಗಳ ಸುತ್ತಲೇ ತಿರುಗಿಸುತ್ತಾ.....

ನಿಮ್ಮ ಪ್ರೀತಿಯ ಹೊಳೆಯಲ್ಲಿ ತೇಲಿಸಿ ಇದೀಗ ನಿಮ್ಮ ಒಬ್ಬಳೇ ಮಗಳ ಪ್ರೀತಿಯ ಆಸೆಗೆ ನೀವೇ ಶತ್ರುವಾಗಿ, ನಿಮ್ಮ ಪ್ರೀತಿ ನಿಜ ಪ್ರೀತಿಯಲ್ಲ, ಅದು ನಿಮ್ಮ ಹಣ ಅಧಿಕಾರ ಅಂತಸ್ತು ಗೌರವ ಮರ್ಯಾದೆ ನಿಯಂತ್ರಣ ನಿರೀಕ್ಷೆ ಸ್ವಾರ್ಥಲೇಪಿತ ಪ್ರೀತಿಯ ಮುಖವಾಡ ಎಂದು ಬಯಲು ಮಾಡಿದಿರಿ.....

ಅಪ್ಪಾ....

ನಾನೇನು ತಪ್ಪು ಮಾಡಿದ್ದೇನೆ.

ಸತ್ಯ ಹೇಳುತ್ತೇನೆ ಕೇಳಿ....

ನನ್ನ ಕಾಲೇಜಿನ ಜೊತೆಗಾರ – ದೀರ್ಘಕಾಲದ ಆತ್ಮೀಯ ಸ್ನೇಹಿತ ಒಂದು ದಿನ ನನ್ನನ್ನು ಪ್ರೀತಿ ಮಾಡುತ್ತಿರುವುದಾಗಿ ಹೇಳಿದ.

ಅಪ್ಪಾ ಅಲ್ಲಿಯವರೆಗೂ ಸಹಜವಾಗಿದ್ದ ನನ್ನ ಭಾವನೆಗಳು ಅಲ್ಲಿಂದ ನನ್ನ ನಿಯಂತ್ರಣ ಕಳೆದುಕೊಂಡವು. ಆತನಿಗೆ ಒಂದು ವಾರ ಸಮಯ ಕೇಳಿದೆ.

ನಾನೇನು ಲಜ್ಜೆಗೆಟ್ಟವಳಲ್ಲ ಅಪ್ಪ. ನಿಮ್ಮ ಪ್ರೀತಿಯ ಮಗಳು. ನನಗೂ ಜವಾಬ್ದಾರಿ ಇದೆ. ಆ ಒಂದು ವಾರ ಉಂಟಾದ ತಳಮಳ ಹೇಗೆ ಹೇಳಲಿ. ಊಟ ತಿಂಡಿ ನಿದ್ದೆ ಎಲ್ಲವೂ ನನ್ನಿಂದ ದೂರವಾದವು. ಜೀವನದಲ್ಲಿ ಮೊದಲ ಬಾರಿಗೆ ಆ ಅನುಭವ ನನಗಾಯಿತು.

ಅಪ್ಪಾ,

ನಿಜ ಹೇಳಲೇ, ಆ ಕ್ಷಣದಿಂದ ನನ್ನ ಮನಸ್ಸಿನಲ್ಲಿ ನನ್ನ ಜೊತೆಗಾರನಿಗಿಂತ ನೀವೇ ಹೆಚ್ಚು ಆಕ್ರಮಿಸಿದಿರಿ. ನಿಮಗೆ ಈ ವಿಷಯ ಹೇಗೆ ಹೇಳಬೇಕು ಎಂಬುದೇ ನನ್ನ ಚಡಪಡಿಕೆಯಾಗಿತ್ತು. ಅಮ್ಮ ಈ ವಿಷಯ ಒಪ್ಪುವುದಿಲ್ಲ ಎಂದು ನನ್ನ ಅನುಭವದ ಒಳ ಮನಸ್ಸು ಹೇಳಿತು. ಏಕೆಂದರೆ ನನ್ನ ಮದುವೆಯ ಶ್ರೀಮಂತಿಕೆ ಪ್ರದರ್ಶನ ಮಾತುಗಳೇ ಅವರಿಂದ ಸದಾ ಬರುತ್ತಿತ್ತು. ಅಳಿಯನ ಅಂತಸ್ತು ಅವರಿಗೆ ಮುಖ್ಯವಾಗಿತ್ತು.

ಆದರೆ,

ಅಪ್ಪಾ,

ನೀವೂ ಸಹ ನನ್ನ ಪ್ರೀತಿಯ ಭಾವನೆಗಳನ್ನು ನಿಮ್ಮೊಂದಿಗೆ ಹಂಚಿಕೊಳ್ಳವಷ್ಟು ಅಂತರ ನನಗೆ ನೀಡಿರಲಿಲ್ಲ. ಆದರೂ ನನ್ನ ಪ್ರೀತಿಯಲ್ಲಿ ನೀವೇ ಮುಖ್ಯವಾದಿರಿ.

ಒಂದು ದಿನ ಭಯಪಡುತ್ತಾ ನಿಮ್ಮೊಂದಿಗೆ ನನ್ನ ಪ್ರೀತಿಯ ವಿಷಯ ಹೇಳಿದೆ.....

ಅಬ್ಬಾ, ಮೊದಲ ಬಾರಿಗೆ ನಿಮ್ಮ ಆ ರೌದ್ರಾವತಾರ ನೋಡಿ ನನಗೆ ಸಾವಿನ ಭಯ ಕಾಡಿತು.

ಅಪ್ಪಾ,

ಅಷ್ಟೊಂದು ಅನುಭವದ ವಿದ್ಯಾವಂತರಾದ ನೀವು ಎಳೆಯ ಮನಸ್ಸಿನ ಪ್ರೀತಿಯ ಆಳ ಅರಿಯುವ ಮೊದಲ ಹೆಜ್ಜೆಯಲ್ಲೇ ವಿಫಲರಾದಿರಿ.

ಅಲ್ಲಿಂದಲೇ ನಮ್ಮಿಬ್ಬರ ನಡುವಿನ ಅಂತರ ಹೆಚ್ಚಾಯಿತು......

ಆದರೂ ಅಪ್ಪ,

ನಿಮ್ಮ ಮೇಲಿನ ಗೌರವದಿಂದ ನಾನು ನನ್ನ ಜೊತೆಗಾರನಿಗೆ ಆತನ ಪ್ರೀತಿಯನ್ನು ತಿರಸ್ಕರಿಸಿದೆ. ಇದು ಸಾಧ್ಯವಿಲ್ಲ ಎಂದು ಹೇಳಿದೆ. ಇದು ನಿಜ ಅಪ್ಪ....

ವಿಪರ್ಯಾಸ ಏನು ಗೊತ್ತಾ ಅಪ್ಪಾ,.....

ಅಲ್ಲಿಂದಲೇ ನೀವು ನನ್ನ ಮೇಲೆ ನಿಯಂತ್ರಣ ಸಾಧಿಸಿ ನನ್ನೊಡನೆ ಅಸಹನೆ ಪ್ರದರ್ಶಿಸಲು ಪ್ರಾರಂಭಿಸಿದಿರಿ. ಅಮ್ಮನಂತೂ ನನ್ನ ಮೇಲೆ ಮೊದಲ ಬಾರಿಗೆ ಕೈ ಮಾಡಿದರು. ನನ್ನ ಎಳೆಯ ಮನಸ್ಸಿಗೆ ಅದು ಬಹುದೊಡ್ಡ ಹಿಂಸೆಯಾಯಿತು. ಅದೇ ಸಮಯಕ್ಕೆ ನನಗೆ ನನ್ನ ಯಾತನೆ ಹೇಳಿಕೊಳ್ಳಲು ಯಾರಾದರೂ ಒಬ್ಬರ ಅವಶ್ಯಕತೆ ಮತ್ತು ಅನಿವಾರ್ಯತೆ ಉಂಟಾಯಿತು..

ಒಂದು ದಿನ ನನ್ನಿಂದ ತಿರಸ್ಕರಿಸಲ್ಪಟ್ಟಿದ್ದ ಅದೇ ಜೊತೆಗಾರ ನನ್ನ ಸ್ನೇಹಿತೆಯಿಂದ ಬದಲಾಗಿದ್ದ ನನ್ನ ಮೊಬೈಲ್ ನಂಬರ್ ಪಡೆದು ಆತನಿಗೆ ಒಳ್ಳೆಯ ಕಂಪನಿಯಲ್ಲಿ ಉದ್ಯೋಗ ಸಿಕ್ಕಿರುವ ವಿಷಯ ತಿಳಿಸಿ ಕೊನೆಗೆ ಒಂದು ಮಾತು ಹೇಳಿದ,

" ಮುದ್ದು ನಾನು ಈಗಲೂ ನಿನ್ನನ್ನು ಅಷ್ಟೇ ಪ್ರೀತಿಸುತ್ತೇನೆ. ಆದರೆ ಒತ್ತಾಯ ಮಾಡುವುದಿಲ್ಲ. ನೀನು ಮದುವೆಯಾಗುವವರೆಗೂ ನಾನು ನಿನ್ನನ್ನು ಪ್ರೀತಿಸುತ್ತಲೇ ಇರುತ್ತೇನೆ. ನಿನ್ನ ಮದುವೆ ಆದ ಕ್ಷಣದಿಂದ ನಿನ್ನಿಂದ ದೂರಾಗುತ್ತೇನೆ. ಇದು ಸ್ಪಷ್ಟ " ಎಂದು ಹೇಳಿದ.

ಅಪ್ಪಾ,

ಅತೃಪ್ತಿಯಿಂದ ಕುದಿಯುತ್ತಿದ್ದ ನನ್ನ ಮನಸ್ಸಿಗೆ ಆ ಮಾತುಗಳೇ ಸಂಜೀವಿನಿಯಾಯಿತು...........

ಅಲ್ಲಿಂದ ಇಲ್ಲಿಯವರೆಗೂ ನಡೆದದ್ದು ಊಹಿಸಲು ಅಸಾಧ್ಯ....

ನನ್ನ ಪ್ರೀತಿಯ ಅದೇ ಪಪ್ಪಾ ಇಂದು ನನ್ನನ್ನು ಕೊಲ್ಲಲು ಹವಣಿಸುತ್ತಿದ್ದಾರೆ. ನನ್ನನ್ನು ದ್ವೇಷಿಸುತ್ತಿದ್ದಾರೆ. ನಾನು ನನ್ನ ಜೊತೆಗಾರನೊಂದಿಗೆ ಮನೆಬಿಟ್ಟು ಹೇಳದೆ ಕೇಳದೇ ಬಂದದ್ದು ಅವರ ವಂಶಕ್ಕೆ ಕಳಂಕವಂತೆ.

ಅಪ್ಪಾ,

ನಿಜ ಹೇಳಿ, ನಾನು ಸತ್ಯ ಹೇಳಿದ್ದರೆ ನೀವು ಒಪ್ಪುತ್ತಿದ್ದಿರೆ. ಈ ಕ್ಷಣದ ಒತ್ತಡದಿಂದ ಹಾಗೆ ಹೇಳುತ್ತಿದ್ದೀರಿ. ಆದರೆ ಪ್ರೀತಿ ವ್ಯಕ್ತಪಡಿಸುವ ಮಾನಸಿಕ ಅವಕಾಶವನ್ನೇ ನೀವು ಕೊಡಲಿಲ್ಲ. ನಿಮ್ಮ ಪ್ರೀತಿಯಿಂದಲೇ ನನ್ನ ಪ್ರೀತಿಯನ್ನು ಕಟ್ಟಿ ಹಾಕಿದಿರಿ. ನಿಮ್ಮ ಪ್ರೀತಿ ನನ್ನಿಂದ ಬಹಳಷ್ಟು ನಿರೀಕ್ಷೆ ಮಾಡಿತು.

ಅಪ್ಪಾ,

ನಾನು ಈಗಲೂ ಹೇಳುತ್ತೇನೆ. ನಾನು ನನ್ನ ಜೊತೆಗಾರನೊಂದಿಗೆಮದುವೆಯಾಗಿದ್ದೇನೆಯೇ ಹೊರತು ಮಾರಾಟವಾಗಿಲ್ಲ. ಒಂದು ವೇಳೆ ಆತ ನಿಷ್ಕಲ್ಮಶ ಪ್ರೀತಿ ಕೊಡಲು ವಿಫಲವಾದರೆ ಆತನನ್ನೂ ತಿರಸ್ಕರಿಸುತ್ತೇನೆ. ಆಗ ನಿನ್ನ ಬಳಿ ಬರುವೆನೆಂದು ನಿರೀಕ್ಷಿಸಬೇಡ. ಎಷ್ಟೇ ಕಷ್ಟ ಬಂದರೂ ನನ್ನ ಬದುಕನ್ನು ನಾನೇ ನಿರ್ವಹಿಸುತ್ತೇನೆ ಸಾವು ಬಂದರೂ ಸಹ.

ಅಪ್ಪಾ,

ನಾನು ನನ್ನ ಜೊತೆಗಾರರನ್ನು ಪ್ರೀತಿಸಿದೆ ಎಂದರೆ ಮನೆಯವರನ್ನು ದ್ವೇಷಸುತ್ತೇನೆ ಎಂದು ಅರ್ಥವಲ್ಲ.

ನಾನು ಮಾತ್ರ ಈಗಲೂ ನಿನ್ನನ್ನು ಅಮ್ಮನನ್ನು ಅಷ್ಟೇ ಪ್ರೀತಿಸುತ್ತೇನೆ. ನಿಮಗೆ ಯಾವುದೇ ಸಂಧರ್ಭದಲ್ಲಿ ಯಾವುದೇ ತೊಂದರೆಯಾದರೂ ನಿಮ್ಮ ಸೇವೆಗೆ ನಾನು ಸದಾ ಸಿದ್ದ ಯಾವುದೇ ನಿರೀಕ್ಷೆಯಿಲ್ಲದೆ. ಏಕೆಂದರೆ ನೀವು ನನಗೆ ಜನ್ಮ ನೀಡಿದ ತಂದೆ ತಾಯಿ. ನನ್ನ ದೇಹದಲ್ಲಿ ಹರಿಯುತ್ತಿರುವುದು ನಿಮ್ಮದೇ ರಕ್ತ.

ಅಪ್ಪಾ,

ಕೊನೆಯದಾಗಿ,.....

ನನಗೆ ಗೊತ್ತು ನೀವು ಈ ಪತ್ರ ಮೊದಲಿಗೆ ಓದುವುದಿಲ್ಲ.ಆದರೆಆಮೇಲೆರಾತ್ರಿಮಲಗುವಾಗ ಅಮ್ಮನಿಗೆ ಕಾಣದಂತೆ ಕದ್ದು ಮುಚ್ಚಿ ಓದುವಿರಿ. ಓದುತ್ತಿದ್ದಂತೆ ನಿಮ್ಮ ಕಣ್ಣಿನಿಂದ ಹರಿಯುವ ನೀರನ್ನು ಯಾರೂ ತಡೆಯಲಾರರು.

ಅಪ್ಪಾ,

ನನಗೆ ಈ ಕ್ಷಣದಲ್ಲಿ ನನ್ನ ಗಂಡನ ತೋಳ್ತೆಕ್ಕೆಗಿಂತ ನಿನ್ನ ಅಪ್ಪುಗೆ ಬೇಕಿನಿಸುತ್ತಿದೆ.

ಅಮ್ಮನ ಮಡಿಲು ಸ್ವರ್ಗದಂತೆ ಕಾಣುತ್ತಿದೆ.

ಪಪ್ಪಾ,,

ನಾನು ನಿನ್ನ ಕ್ಷಮೆ ಕೇಳುವುದಿಲ್ಲ.ಏಕೆಂದರೆ ನಾನು ತಪ್ಪು ಮಾಡಿಲ್ಲ. ಪ್ರೀತಿಸುವುದು ಜೀವಿಯ ಸಹಜ ಗುಣ.

ಜಾತಿ ಅಂತಸ್ತು ಅಧಿಕಾರ ಮಾಧ್ಯಮ ಅವಮಾನ ಎಲ್ಲಾ ಭ್ರಮೆ ಪಪ್ಪಾ.

ನನಗಿನ್ನೂ 24 ಪಪ್ಪಾ. ನಿನಗೆ 55.

ಪಪ್ಪಾ ಪಪ್ಪಾ ಈ ಕ್ಷಣ ನೀನು ಈ ಪತ್ರ ಓದಿ ನನಗೆ ಕಾಲ್ ಮಾಡಿದರೆ ನಾನು ಸಾವಿನ ಭಯವನ್ನೂ ಇನ್ನೆಂದು ಅನುಭವಿಸುವುದಿಲ್ಲ. ಸಾವನ್ನು ಗೆದ್ದಷ್ಟು ಸಂಭ್ರಮಿಸುತ್ತೇನೆ.....

ನನ್ನ ಪಪ್ಪ ಎಂದೆಂದಿಗೂ ಪಪ್ಪನೇ................


ಬೇಗ ಕಾಲ್ ಮಾಡಿ ಪಪ್ಪಾ...

ನನ್ನ ಗಂಡ ಕೂಡ ನನ್ನ ಸಂಕಟ ನೋಡಿ ನನ್ನೊಂದಿಗೆ ಅಳುತ್ತಿದ್ದಾನೆ.........

ಪ್ರೀತಿ ಎಲ್ಲವನ್ನೂ ಗೆಲ್ಲುತ್ತದೆ..

ನನ್ನ ಅಪ್ಪ ಅಮನನ್ನೂ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T